ಸಂಪುಟ 01 । ಸಂಚಿಕೆ 81 । ಭಾನುವಾರ 01 ಫೆಬ್ರವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಭಾರತೀಯ ಕರಾವಳಿ ಕಾವಲು ಪಡೆ ದಿನ**

ಫೆಬ್ರವರಿ 1 ರಂದು, ಭಾರತೀಯ ಕರಾವಳಿ ಕಾವಲು ಪಡೆ ತನ್ನ ಸಂಸ್ಥಾಪನಾ ದಿನವನ್ನು ಆಚರಿಸುತ್ತದೆ. ಈ ವರ್ಷ, ಭಾರತೀಯ ಕರಾವಳಿ ಕಾವಲು ಪಡೆ ತನ್ನ 47 ನೇ ಸ್ಥಾಪನಾ ದಿನವನ್ನು ಆಚರಿಸುತ್ತಿದೆ. ಭಾರತೀಯ ಕರಾವಳಿ ಕಾವಲು ಪಡೆ ಭಾರತೀಯ ಕರಾವಳಿಗಳನ್ನು ಸುರಕ್ಷಿತಗೊಳಿಸುವಲ್ಲಿ ಮತ್ತು ಭಾರತದ ಕಡಲ ವಲಯಗಳಲ್ಲಿ ನಿಯಮಗಳನ್ನು ಜಾರಿಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ.

**2) ಗುರು ರವಿದಾಸ ಜಯಂತಿ**

ಫೆಬ್ರವರಿ 1 ಗುರು ರವಿದಾಸ ಜಯಂತಿಯಾಗಿದ್ದು, ಮಹಾನ್ ಸಂತ ಮತ್ತು ಸಮಾಜ ಸುಧಾರಕ ಗುರು ರವಿದಾಸರ ಜನ್ಮ ದಿನವಾಗಿದೆ. ಈ ದಿನವು ಸಮಾನತೆ, ಕರುಣೆ ಮತ್ತು ತಾರತಮ್ಯ ಮುಕ್ತ ಸಮಾಜದ ಕುರಿತು ಅವರ ಬೋಧನೆಗಳನ್ನು ನೆನಪಿಸುತ್ತದೆ.

## ಸುಭಾಷಿತ

ನಿನ್ನನ್ನು ಪೀಡಿಸುವ ಸಂಕಟಗಳನ್ನು ನಗುನಗುತ್ತಾ ನಾಶಪಡಿಸು.

ಸ್ವಾಮಿ ವಿವೇಕಾನಂದ.

# ರಾಜಕೀಯ ಧ್ರುವೀಕರಣ ಪಾರದರ್ಶಕತೆ ಹಾಳು ಮಾಡುತ್ತಿದೆ ;ಅರ್ಥಶಾಸ್ತ್ರಜ್ಞ ಅಭಿಜಿತ್ ಬ್ಯಾನರ್ಜಿ

**ಕೋಲ್ಕತ್ತಾ: ನೊಬೆಲ್ ಪ್ರಶಸ್ತಿ ವಿಜೇತ ಅರ್ಥಶಾಸ್ತ್ರಜ್ಞ ಅಭಿಜಿತ್ ಬ್ಯಾನರ್ಜಿ ಅವರು ಭಾರತದಲ್ಲಿ ರಾಜಕೀಯ ಧ್ರುವೀಕರಣವು ಪಾರದರ್ಶಕತೆಯನ್ನು ಹಾಳು ಮಾಡುತ್ತಿದೆ ಮತ್ತು ಜಾಗತಿಕ ಹೂಡಿಕೆದಾರರಿಗೆ ದೇಶವನ್ನು ನಿಗೂಢವನ್ನಾಗಿ ಮಾಡುತ್ತಿದೆ ಎಂದು ಎಚ್ಚರಿಸಿದ್ದಾರೆ.**

ಆರ್ಥಿಕ ದೃಷ್ಟಿಕೋನದಿಂದ, ಇಂದು ದೇಶ ಎದುರಿಸುತ್ತಿರುವ ಅತ್ಯಂತ ನಿರ್ಣಾಯಕ ಸಮಸ್ಯೆಗಳು ಮಾಧ್ಯಮ ಸ್ವಾತಂತ್ರ್ಯ ಮತ್ತು ಪಾರದರ್ಶಕತೆ ಎಂದು ಹೇಳಿದರು, ಹೂಡಿಕೆದಾರರು ಅಂತಿಮವಾಗಿ ರಾಜಕೀಯ ವಾಕ್ಚಾತುರ್ಯಕ್ಕಿಂತ ದತ್ತಾಂಶ ವಿಶ್ವಾಸಾರ್ಹತೆಯ ಬಗ್ಗೆ ಕಾಳಜಿ ವಹಿಸುತ್ತಾರೆ ಎಂದು ವಾದಿಸಿದರು. ಭಾರತವು ರಾಜಕೀಯವಾಗಿ ಧ್ರುವೀಕೃತ ಹಂತದ ಮೂಲಕ ಸಾಗುತ್ತಿದೆ ಎಂದು ನಾನು ಭಾವಿಸುತ್ತೇನೆ, ಏಕೆಂದರೆ ಅದು ದೀರ್ಘಕಾಲದವರೆಗೆ ಅಸ್ತಿತ್ವದಲ್ಲಿದೆ ಮತ್ತು ನಾವು ಒಂದು ರಾಷ್ಟ್ರವಾಗಿ, ನಾವು ಎಷ್ಟರ ಮಟ್ಟಿಗೆ ಮುಕ್ತ ಮತ್ತು ವಿಶ್ವಾಸಾರ್ಹರಾಗಿ ಕಾಣಬೇಕೆಂದು ಬಯಸುತ್ತೇವೆ ಎಂಬುದನ್ನು ನಾವು ನಿರ್ಧರಿಸಬೇಕು.

ನಿಜವಾದ ಸಮಸ್ಯೆಗಳು ಮಾಧ್ಯಮ ಸ್ವಾತಂತ್ರ್ಯಕ್ಕೆ ಸಂಬಂಧಿಸಿವೆ ಎಂದು ನಾನು



ಭಾವಿಸುತ್ತೇನೆ ಎಂದು ಅವರು ಹೇಳಿದರು. ಪ್ರಮುಖ ಸಮಸ್ಯೆಗಳು ಮಾಧ್ಯಮ ಸ್ವಾತಂತ್ರ್ಯ ಮತ್ತು ಪಾರದರ್ಶಕತೆ. ಸಂಖ್ಯೆಗಳು ಏನೆಂದು ನಮಗೆ ನಿಜವಾಗಿಯೂ ತಿಳಿದಿದೆಯೇ? ಹೂಡಿಕೆದಾರರು ಕಾಳಜಿ ವಹಿಸುವುದು ಅದನ್ನೇ ಎಂದು ಬ್ಯಾನರ್ಜಿ ಹೇಳಿದರು.ಭಾರತವು ವಿದೇಶಿ ಹೂಡಿಕೆಯನ್ನು ಆಕರ್ಷಿಸುವುದನ್ನು ಮುಂದುವರೆಸಿದೆಯಾದರೂ, ಒಳಹರಿವು ಅಸ್ಥಿರ ಮತ್ತು ಅನಿಶ್ಚಿತತೆಗೆ ಹೆಚ್ಚು ಸೂಕ್ಷ್ಮವಾಗಿದೆ ಎಂದು ಅವರು ವಿವರಿಸಿದರು. ವಿದೇಶಿ ಹೂಡಿಕೆಯಲ್ಲಿ ನಾವು ಸಾಕಷ್ಟು ಉತ್ತಮವಾಗಿ ಕಾರ್ಯನಿರ್ವಹಿಸಿದ್ದೇವೆ, ಆದರೆ ಅದು ಅಲ್ಪಕಾಲಿಕವಾಗಿದೆ. ಹಣವು ವೇಗವಾಗಿ ಬರದ ಕಾರಣ ರೂಪಾಯಿ ಮೌಲ್ಯ ಕುಸಿಯುತ್ತಿದೆ ಎಂದು ಅವರು ಹೇಳಿದರು, ಕರೆನ್ಸಿ ದೌರ್ಬಲ್ಯವನ್ನು ನಿರಂತರ ಬಂಡವಾಳ ಒಳಹರಿವಿನ ಅನುಪಸ್ಥಿತಿಗೆ ಜೋಡಿಸಿದರು.

ನೀತಿಯ ಅನಿರೀಕ್ಷಿತತೆಯು ಆಂತರಿಕ ಧ್ರುವೀಕರಣದೊಂದಿಗೆ ಸೇರಿ, ದೀರ್ಘಾವಧಿಯ ಹೂಡಿಕೆ ತಾಣವಾಗಿ ದೇಶದ ವಿಶ್ವಾಸಾರ್ಹತೆಯನ್ನು ದುರ್ಬಲಗೊಳಿಸುತ್ತಿದೆ ಎಂದು ಬ್ಯಾನರ್ಜಿ ಎಚ್ಚರಿಸಿದರು.ನೀತಿ ನಿಯಮಗಳು ಏನೆಂದು ಜನರು ತಿಳಿದುಕೊಳ್ಳಬೇಕು. ನಿರ್ದಿಷ್ಟ ಕಂಪನಿಗಳ ಕಡೆಗೆ ವರ್ತನೆಯಲ್ಲಿ ಬದಲಾವಣೆಗಳಾಗುತ್ತವೆಯೇ? ಅವರು ಹೇಳಿದರು. ನಮ್ಮಲ್ಲಿ ಬಹಳ ಊಹಿಸಬಹುದಾದ ಮತ್ತು ಪಾರದರ್ಶಕ ನೀತಿ ಆಡಳಿತ ಮತ್ತು ಪಾರದರ್ಶಕ ಮಾಧ್ಯಮ ಇಲ್ಲದಿದ್ದರೆ, ಭಾರತವು ಜಗತ್ತಿಗೆ ನಿಗೂಢವಾಗಿ ಉಳಿಯುತ್ತದೆ ಎಂದು ಅವರು ಹೇಳಿದರು.ಭಾರತವು ತನ್ನ ಬಂಡವಾಳ ಮಾರುಕಟ್ಟೆಗಳನ್ನು ಆಳಗೊಳಿಸಲು ಮತ್ತು ದೀರ್ಘಕಾಲೀನ ಜಾಗತಿಕ ಬಂಡವಾಳವನ್ನು ಆಕರ್ಷಿಸಲು ಬಯಸಿದರೆ, ಪಾರದರ್ಶಕತೆ ಸಾಂದರ್ಭಿಕವಾಗಿರದೆ ಸಾಂಸ್ಥಿಕವಾಗಿರಬೇಕು ಎಂದು ಅವರು ಹೇಳಿದರು. ನಮ್ಮ ಆಂತರಿಕ ಧ್ರುವೀಕರಣವು ಪಾರದರ್ಶಕತೆಗೆ ನಮ್ಮ ಬದ್ಧತೆಯನ್ನು ದುರ್ಬಲಗೊಳಿಸುತ್ತಿದೆ ಎಂದು ನಾನು ಭಾವಿಸುತ್ತೇನೆ. ಮತ್ತು ಅದು ಪ್ರಮುಖ ಅಂಶ ಎಂದು ನಾನು ಭಾವಿಸುತ್ತೇನೆ.

## ಜಪ್ತಿ ಮಾಡಿದ ಮರಳನ್ನು ಕಾಮಗಾರಿಗಳಿಗೆ ಉಪಯೋಗಿಸಲು ಅವಕಾಶ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾ ಮತ್ತು ತಾಲ್ಲೂಕು ಮರಳು ಸಮಿತಿ ಸದಸ್ಯರಿಂದ ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ಸಾಗಾಣಿಕೆ, ದಾಸ್ತಾನು ಕುರಿತಂತೆ ಪ್ರಕರಣಗಳನ್ನು ದಾಖಲು ಮಾಡಿದ್ದು, ಈ ಪ್ರಕರಣಗಳಲ್ಲಿ ಮರಳನ್ನು ಇಲಾಖೆಯ ವಶಕ್ಕೆ ಪಡೆಯಲಾಗಿದೆ.**

ಈ ಜಪ್ತು ಮರಳನ್ನು ಸರ್ಕಾರಿ ಕಾಮಗಾರಿಗಳಿಗೆ ಉಪಯೋಗಿಸಲು ಜಿಲ್ಲಾ ಮರಳು ಸಮಿತಿಯಿಂದ ಪ್ರತಿ ಮೆಟ್ರಿಕ್ ಟನ್‌ಗೆ 541 ರೂ.ಗಳಂತೆ ದರ ನಿಗದಿಪಡಿಸಿದ್ದು, ಈ ಜಪ್ತು ಮರಳನ್ನು ಲೋಕೋಪಯೋಗಿ ಇಲಾಖೆ, ಭೂಸೇನೆ, ಸಣ್ಣ ನೀರಾವರಿ, ಪಿಆರ್‌ಇಡಿ, ವಿಮಾನ ನಿಲ್ದಾಣ, ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ರೈಲ್ವೆ, ಕೆ.ಕೆ.ಆರ್.ಡಿ.ಬಿ, ಪ್ರಮುಖ ನೀರಾವರಿ ಇಲಾಖೆಗಳು ಹಾಗೂ ಇತರೆ ಸರ್ಕಾರಿ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಮಗಾರಿಗಳಿಗೆ ಸದುಪಯೋಗಪಡಿಸಿಕೊಳ್ಳಲು ಜಿಲ್ಲಾ ಮರಳು ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಸರ್ಕಾರಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಮಗಾರಿಗಳಿಗೆ ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಸಂಪರ್ಕಿಸಬಹುದಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆಗೆ ಇಂದು ಚಾಲನೆ


❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಜ್ಯೋತಿ ರಥಯಾತ್ರೆಗೆ ಫೆ.1ರಂದು ಬೆಳಗ್ಗೆ 10 ಗಂಟೆಗೆ ನಗರದ ಐತಿಹಾಸಿಕ ಕರ್ನಾಟಕ ಸಂಘದ ಆವರಣದಿಂದ ಚಾಲನೆ ಸಿಗಲಿದೆ.**

ಮೇಲಧಿಕಾರಿಗಳಿಂದ ಸೂಚನೆ: ಜಿಲ್ಲೆಯ ಪ್ರತಿಯೊಂದು ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಜ್ಯೋತಿ ರಥಯಾತ್ರೆಯಲ್ಲಿ ಭಾಗಿಯಾಗಲು ಆಯಾ ಕಚೇರಿಯ ಮೇಲಧಿಕಾರಿಗಳು ಕಚೇರಿ ಆದೇಶ ಹೊರಡಿಸಿ ತಮ್ಮ ತಮ್ಮ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಬೇಕು ಎಂದು




ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದ್ದರಿಂದಾಗಿ ಬೇರೆ ಬೇರೆ ಇಲಾಖೆಗಳ ಕಚೇರಿಗಳಲ್ಲಿ ಕಚೇರಿ




ಆದೇಶ ಜಾರಿ ಮಾಡಿ ಕ್ರಮವಹಿಸಲಾಗಿದೆ.

ಆಯುಕ್ತರಿಂದ ಕಚೇರಿ ಆದೇಶ: ಮಹಾನಗರ ಪಾಲಿಕೆಯ ಕರವಸೂಲಿಗಾರರು, ಎಸ್‌ಎಚ್‌ಜಿ ಕರವಸೂಲಿಗಾರರು, ತಮ್ಮ ಪ್ಯಾಕೇಜನಿಂದ ತಲಾ 20 ಜನ ಪೌರ ಕಾರ್ಮಿಕರನ್ನು ಕರೆ ತರಲು ಮತ್ತು ಎಲ್ಲ ಸಮುದಾಯ ಸಂಘಟಕರನ್ನು ಕರೆ ತರಬೇಕು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಕಚೇರಿ ಆದೇಶದ ಮೂಲಕ ಪಾಲಿಕೆಯ ಕಂದಾಯ ಅಧಿಕಾರಿಗಳು, ಕಚೇರಿ ವ್ಯವಸ್ಥಾಪಕರು, ಹಿರಿಯ ಕಿರಿಯ ಆರೋಗ್ಯ ನಿರೀಕ್ಷಕರಿಗೆ ಸೂಚನೆ ನೀಡಿದ್ದಾರೆ.

ಹಾಜರಾತಿ ಸಲ್ಲಿಸಲು ಸೂಚನೆ: ಜಿಲ್ಲೆಯ ಎಲ್ಲಾ ಮುಖ್ಯ ಅಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ತಮ್ಮ ಕಾರ್ಯಾಲಯದ ಸಿಬ್ಬಂದಿಯೊಂದಿಗೆ ತಪ್ಪದೆ ಬೆಳಿಗ್ಗೆ 10 ಗಂಟೆಗೆ ಹಾಜರಿರಬೇಕು ಹಾಗೂ ಕಾರ್ಯಕ್ರಮದ ನಂತರ ಹಾಜರಾತಿಯನ್ನು ಕಡ್ಡಾಯವಾಗಿ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

## ರೇಸ್ ಕಾನ್ಸೆಪ್ಟ್ ಶಾಲೆ, ನವೋದಯ ಮೆಡಿಕಲ್ ಕಾಲೇಜಿನಲ್ಲಿ ರಾಯಚೂರು ಉತ್ಸವದ ಪ್ರಚಾರ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ನಗರದ ರೇಸ್ ಕಾನ್ಸೆಪ್ಟ್ ಶಾಲೆ ಮತ್ತು ನವೋದಯ ಮೆಡಿಕಲ್ ಕಾಲೇಜ್‌ನಲ್ಲಿ ಜನವರಿ 31ರಂದು ಎಡೆದೊರೆ ನಾಡು ರಾಯಚೂರು ಉತ್ಸವ 2026ದ ಪ್ರಚಾರ, ಜಾಹೀರಾತು ಮತ್ತು ಮಾಧ್ಯಮ ಸಮಿತಿಯಿಂದ ಪ್ರಚಾರ ಕಾರ್ಯ ನಡೆಯಿತು.**

ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿ ಮತ್ತು ಪ್ರಚಾರ ಸಮಿತಿಯ ಸದಸ್ಯರಾದ ಸದಾಶಿವಪ್ಪ ಅವರು ಉತ್ಸವದ ಮಹತ್ವದ ಕುರಿತು ಮಾತನಾಡಿ, ಫೆಬ್ರವರಿ 5, 6 ಮತ್ತು 7ರಂದು ನಡೆಯಲಿರುವ ಉತ್ಸವದಲ್ಲಿ ವಿದ್ಯಾರ್ಥಿಗಳು ಪಾಲಕರ ಜೊತೆಗೂಡಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವವನ್ನು



ಯಶಸ್ವಿಗೊಳಿಸಬೇಕು. ರಾಯಚೂರು ಜಿಲ್ಲೆಯಲ್ಲಿ ಬಹಳಷ್ಟು ವರ್ಷಗಳ ನಂತರ ಉತ್ಸವ ನಿಗದಿಯಾಗಿದೆ. ಜನರು ಸ್ವಯಂ ಪ್ರೇರಣೆಯಿಂದ ಆಗಮಿಸಿ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದು ಕೋರಿದರು. ಈ ಕಾರ್ಯಕ್ರಮದಲ್ಲಿ ಶಾಲೆಯ ನಿರ್ದೇಶಕರಾದ ಶಾರದಾದೇವಿ, ಪ್ರಿನ್ಸಿಪಾಲ್ ಭಾವನಾ ಹಾಗೂ ಶಾಲೆಯ ಎಲ್ಲ ಸಿಬ್ಬಂದಿ ಮತ್ತು ಪ್ರಚಾರ ಸಮಿತಿಯ ಸದಸ್ಯರಾದ ನಾಗರಾಜ್ ಅವರು ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗಳ ಕಾರ್ಯಕ್ರಮದ ಸಿದ್ಧತೆ ಪರಿಶೀಲಿಸಿದ ಜಿಲ್ಲಾಧಿಕಾರಿಗಳು

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನ ಕಾರ್ಯಕ್ರಮದಲ್ಲಿ ಭಾಗಿಯಾಗಲು ಫೆ.1ರಂದು ಮುಖ್ಯಮಂತ್ರಿಗಳು ರಾಯಚೂರು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ ಅವರೊಂದಿಗೆ ಜನವರಿ 31ರಂದು ಸಂಜೆ ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದ ಕನಕ ಗುರುಪೀಠದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.**

ಮುಖ್ಯಮಂತ್ರಿಗಳು



ಆಗಮಿಸಲು ಗುರುತಿಸಿದ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಬಂಡೊಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹೆಲಿಪ್ಯಾಡ್ ಸ್ಥಳಕ್ಕೆ ಸಹ ಭೇಟಿ ನೀಡಿ, ಸುರಕ್ಷತಾ ಕ್ರಮಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಭದ್ರತಾ ಕಾರ್ಯಕ್ಕೆ ನಿಯೋಜಿಸಿ ಸುರಕ್ಷತೆ, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಇದೆ ವೇಳೆ ಜಿಲ್ಲಾಧಿಕಾರಿಗಳು, ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ದರ್ಶನ ಪಡೆದುಕೊಂಡರು.

# ದೇಶವನ್ನು ವೈಭವದತ್ತ ನಡೆಸುವ ಜವಾಬ್ದಾರಿ ಹಿಂದೂಗಳ ಮೇಲಿದೆ.

❏ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ದೇಶವನ್ನು ವೈಭವದತ್ತ ನಡೆಸುವ ಜವಬ್ದಾರಿ ಹಿಂದುಗಳ ಮೇಲಿದೆ ಎಂದು ಧರ್ಮ ಜಾಗರಣಾ ಮಂಚ್‌ನ ಪ್ರಾಂತ ಪ್ರಚಾರಕ ದತ್ತಾತ್ರೇಯ ನಾಯಕ ಹೇಳಿದರು. ಪಟ್ಟಣದ ದೊಡ್ಡ ಹನುಮಂತ ದೇವಸ್ಥಾನ ಮುಂಭಾಗದಲ್ಲಿ ಹಿಂದು ಸಮ್ಮೇಳನ ಸಮಿತಿಯಿಂದ ಆಯೋಜಿಸಿದ್ದ ಹಿಂದು ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸೃಷ್ಟಿಯು ಹುಟ್ಟಿದಾಗಿನಿಂದ ಸನಾತನ ಹಿಂದು ಧರ್ಮ ಮತ್ತು ಸಂಸ್ಕೃತಿ ಹುಟ್ಟಿಕೊಂಡಿದೆ.**

ಈ ಸೃಷ್ಟಿ ಇರುವವರೆಗೆ ಯಾರಿಂದಲೂ ಸನಾತನ ಧರ್ಮ ಅಳಿಸಲು ಸಾಧ್ಯವಿಲ್ಲ. ಹಿಂದು ಧರ್ಮ ಹೊರತುಪಡಿಸಿ ಎಲ್ಲವೂ ಮತಗಳಾಗಿವೆ. ಯಹೂದಿ, ಇಸ್ಲಾಂ, ಕ್ರೈಸ್ತ ಈ ಮೂರು ಮತಗಳು ಒಂದೇ ಸ್ಥಳದಲ್ಲಿ ಹುಟ್ಟಿವೆ. ಸೇವೆಯ ಮುಖವಾಡ ಧರಿಸಿ ತಮ್ಮ ಮತ ಹೇರಲು ಜಗತ್ತಿನ




ಅನೇಕ ನಾಗರಿಕತೆಗಳನ್ನು ಮುಚ್ಚಿ ಹಾಕಿದರೂ ಭಾರತಕ್ಕೆ ಬಂದು ಆರು ನೂರು ವರ್ಷಗಳ ಕಾಲ ಆಳ್ವಿಕೆ ನಡೆಸಿದರೂ ಇಲ್ಲಿನ ನಾಗರಿಕತೆ, ಸಂಸ್ಕೃತಿ ಮುಚ್ಚಿಹಾಕಲು ಸಾಧ್ಯವಾಗಲಿಲ್ಲ . ನಮ್ಮ ಪೂರ್ವಜರು ಎದೆಕೊಟ್ಟು ನಿಂತಿದ್ದಕ್ಕೆ ನಾವುಗಳು ಈಗಲೂ ಸುರಕ್ಷಿತರಾಗಿದ್ದೇವೆ. ಹಿಂದು ಧರ್ಮ ಕ್ಷೀಣಿಸುತ್ತಿರುವ ವೇಳೆ ಕಾಲಾನುಸಾರ ಒಬಬ್ಬ ಮಹಾನ್ ವ್ಯಕ್ತಿ ಹುಟ್ಟಿ ಬಂದು ಹಿಂದು ಧರ್ಮ ರಕ್ಷಣೆ ಮಾಡಿದ್ದಾನೆ. ವಿಜಯ ನಗರ ಸಾಮ್ರಾಜ್ಯ ಸ್ಥಾಪನೆಯಿಂದ ಹಿಂದು ಧರ್ಮಕ್ಕೆ ಜೀವಕಳೆ ಬಂದಿದೆ.

ಛತ್ರಪತಿ ಶಿವಾಜಿ ಮಹಾರಾಜರು, ಅವರ ಮಗ ಸಂಭಾಜಿ ಮಹಾರಾಜರು ಹಿಂದು ಸ್ವರಾಜ್ಯವನ್ನೇ ಸ್ಥಾಪಿಸಿದರು. ಶಿವಾಜಿ ಮಹಾರಾಜರು ಹುಟ್ಟದಿದ್ದರೆ ಇಡೀ ದೇಶ ಇಸ್ಲಾಮಿಕರಣವಾಗುತ್ತಿತ್ತು. ಅದೇರೀತಿ ಮಹಾರಾಣಾ ಪ್ರತಾಪಸಿಂಹರು, ಗುರುಗೋವಿಂದರು, ತೇಜಬಹಾದ್ದೂರರು ಸೇರಿದಂತೆ ಅನೇಕ ರಾಜ ಮಹಾರಾಜರು ಹಿಂದು ಧರ್ಮ ಉಳಿಸಿ ಬೆಳೆಸುವಲ್ಲಿ ತ್ಯಾಗ ಬಲಿದಾನ ಮಾಡಿದ್ದಾರೆ. ಸ್ವಾಮಿವಿವೇಕಾನಂದರು ಜಗತ್ತಿನಾದ್ಯಂತ ಹಿಂದು ಧರ್ಮ ಮತ್ತು ಹಿಂದುತ್ವದ ಬಗ್ಗೆ ಜಾಗೃತಿ ಮೂಡಿಸಿದರು. ಆಗಸ್ಟ್ 15 ರಂದು ಅಧಿಕಾರ ಹಸ್ತಾಂತರವಾಯಿತೇ ಹೊರತು ನಿಜವಾದ ಸ್ವಾತಂತ್ರ್ಯ ದೊರೆತಿಲ್ಲ.

ದೇಶಕ್ಕೆ ಸ್ವಾತಂತ್ರ್ಯ ಬಂದ ಬಳಿಕವೂ ಹಿಂದುಗಳ ರಕ್ಷಣೆಗೆ ಗಮನ ಹರಿಸುತ್ತಿಲ್ಲ. ಸೌರಾಷ್ಟ್ರದ ಸೋಮನಾಥ ದೇವಸ್ಥಾನ ಜೀರ್ಣೋದ್ಧಾರಕ್ಕೆ ವಿರೋಧ ವ್ಯಕ್ತಪಡಿಸಲಾಯಿತು. ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ನಿರ್ಮಿಸಲು 500 ವರ್ಷಗಳ ಕಾಲ ಹೋರಟ ಮಾಡಬೇಕಾಯಿತು. ಇಂದು ಶ್ರೀರಾಮ ಮಂದಿರ ನಿರ್ಮಾಣದ ಬಳಿಕ ಜಗತ್ತಿನಾದ್ಯಂತ ಹಿಂದುಗಳು ಆರ್ಥಿಕ ಶಕ್ತಿಯಾಗಿ ಪರಿವರ್ತನೆ ಗೊಂಡಿದೆ. ಕರೋನಾ ವೇಳೆ ಹಿಂದುಗಳು ಜಗತ್ತಿನ ಬಹುತೇಕ ರಾಷ್ಟ್ರಗಳಿಗೂ ಲಸಿಕೆ ನೀಡಿ ಜೀವ ಉಳಿಸಿದ್ದಾರೆ. ಹಿಂದುಗಳು ಎದ್ದಾಗಲೆಲ್ಲ ಕಲ್ಯಾಣ ಕಾರ್ಯಗಳು ನಡೆದಿವೆ. ಹಿಂದುಗಳಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸಂಘದ ಶತಾಬ್ಧಿ ವರ್ಷ ಆಚರಿಸಲಾಗುತ್ತಿದ್ದು, ಇದರ ಅಂಗವಾಗಿ ಕುಟುಂಬ, ಪರ್ಯಾವರ್ಣ, ಸಾಮಾಜಿಕ ಸಾಮರಸ್ಯ, ನಾಗರಿಕ ಜವಬ್ದಾರಿ ಮತ್ತು ಸ್ವದೇಶಿ ಎಂಬ ಪಂಚ ಪರಿವರ್ತನ ಸಂಕಲ್ಪ ಅಭಿಯಾನ ನಡೆಸಲಾಗುತ್ತಿದೆ.

ಹೀಗಾಗಿ ಹಿಂದುಗಳು ದೇಶವನ್ನು ವೈಭವದತ್ತ ನಡೆಸುವ ಸಂಕಲ್ಪತೊಡಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಸಮಾವೇಶದ ಸಾನಿಧ್ಯವನ್ನು ಶ್ರೀ ವಿಜಯ ಮಹಾಂತೇಶ್ವರ ಮಠದ ಸಿದ್ಧಲಿಂಗ ಸ್ವಾಮೀಜಿ, ಹವಾ ಮಲ್ಲಿನಾಥ್ ಮಠದ ಮಹಾದೇವ ಸ್ವಾಮೀಜಿ, ಮಾತಾ ಮಾಣಿಕೇಶ್ವರಿ ಮಠದ ನಂದಿಕೇಶ್ವರಿ ಮಾತಾ. ಪ್ರಮುಖರಾದ ಎಂ.ಎಸ್.ಪಾಟೀಲ್, ಸುಮಂತ ಕನಕಗಿರಿ, ಶೋಭಾ ಕಾಟವಾ ಸೇರಿದಂತೆ ಇದ್ದರು.

## ಸಾಹಿತ್ಯ ಸಿಂಚನ

ಜನುಮ ಸಾರ್ಥಕ ನೋಡ

ಇಂದು ಮುಂದಿನದರ ಶೋಧನೆ ಮಾಡುವ ನೀನು
ಹಿಂದೆ ನೀನ್ಯಾರಾಗಿದ್ದೆ ಎಂಬುದ ಮರೆತೆಯೇನು
ಇಂದು ತಿಳಿದುಕೋ ನನ್ನಂತೆ ಅವರೆಂಬುದನು,
ಮುಂದೆ ಸೇರುವೆ ನೀನು ಪ್ರೀತಿ ಸಾಗರವನು.

ಹಗುರ ತಿಳಿಯದರೂ ಮನದೊಳಗೆ ಯಾರನು
ಹಗೆಯಿಂದ ಎಣಿಸದಿರು ಅವರವರ ಬಗೆಯನು
ನೀ ಬಯಸು ಮೊಗದಲಿ ಸ್ನೇಹದ ನಗುವೊಂದನು
ಪಡೆಯುವೆ ನೀ ಎಲ್ಲಾರ ಮೆಚ್ಚುಗೆಯ ಪ್ರೀತಿಯನು

ನಿನ್ನದೇ ಸರಿ ಎಂದು ಅಹಂಲೀ ಮೆರಯಬೇಡ
ಇನ್ನೋಬ್ಬರ ನುಡಿಯ ಆಲಿಸುವುದು ಮರೆಯಬೇಡ
ಚಿನ್ನದ ಮನವು ಎಲ್ಲರಲಿ ಇದ್ದಾಗ ದೂಷಿಸಬೇಡ
ಹಠತೊಟ್ಟು ನಿನಗೆ ನೀನೇ ಮಠ ಕಟ್ಟಿಕೊಳ್ಳಬೇಡ

ಒಮ್ಮೆ ದುಃಖವೇ ಇಲ್ಲವೆಂದು ಸೊಕ್ಕಿನಿಂದರಬೇಡ
ದುಃಖದಿಂದಿರುವೆನೆಂದು ಬಿಕ್ಕಿ ಬಿಕ್ಕಿ ಅಳಬೇಡ
ಯಾವ ದಿಕ್ಕಿನಿಂದ ಬರುವವೋ ಸುಖ ದುಃಖಗಳೇರಡ,
ತಾಳ್ಮೆಯಿಂದಿರು ಸಾಕು ಜನುಮ ಸಾರ್ಥಕನೋಡ

ವೀರೇಶಪ್ಪ ಎಂ ಶಿಕ್ಷಕರು

## ಕಠಿಣ ಪರಿಶ್ರಮವೇ ಯಶಸ್ಸಿನ ನಿಜವಾದ ಗುಟ್ಟು ಶಿವದೇವಾನಂದ ಗುರೂಜಿ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಿದರೆ ಯಾವುದೇ ಕ್ಷೇತ್ರದಲ್ಲಾದರೂ ಯಶಸ್ಸು ಸಾಧಿಸಬಹುದು. ಸಾಧನೆಗೆ ಪರಿಶ್ರಮವೇ ಹೊರತು ಬೇರೆ ಯಾವುದೇ ಶಾರ್ಟ್‌ಕಟ್ ಇಲ್ಲ ಎಂದು ಶಿವದೇವಾನಂದ ಗುರೂಜಿ ಅಭಿಪ್ರಾಯಪಟ್ಟರು. ಅವರು ಮಸ್ಕಿ ತಾಲೂಕಿನ ತುಂಗಭದ್ರ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 15ನೇ ವರ್ಷದ ಕಾಲೇಜು ವಾರ್ಷಿಕೋತ್ಸವ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅಂಕಗಳಷ್ಟೇ ಅಲ್ಲದೆ, ಜೀವನದ ಮೌಲ್ಯಗಳು, ಶಿಸ್ತು ಮತ್ತು ಮಾನವೀಯತೆ ಕೂಡ ವಿದ್ಯಾರ್ಥಿಗಳಲ್ಲಿ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು. ಮುಖ್ಯ ಅತಿಥಿಯಾಗಿದ್ದ ರಾಯಚೂರು ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಮೌನೇಶ್ ನಾಯಕ್ (ಮಸ್ಕಿ) ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಪ್ರಮುಖ ಪಾತ್ರ ವಹಿಸುತ್ತದೆ. ಆತ್ಮವಿಶ್ವಾಸದಿಂದ ಮುನ್ನಡೆದರೆ ಯಾವುದೇ ಗುರಿಯನ್ನಾದರೂ ಸಾಧಿಸಬಹುದು. ಗುರಿ ಸಾಧನೆಗೆ ನಿರಂತರ ಪ್ರಯತ್ನ ಹಾಗೂ ಏಕಾಗ್ರತೆ ಅಗತ್ಯವಿದೆ. ವಿದ್ಯಾರ್ಥಿಗಳ ಮೇಲೆ ಪಾಲಕರು ಬಹಳಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿರುತ್ತಾರೆ, ಅವುಗಳನ್ನು ಈಡೇರಿಸುವ ಜವಾಬ್ದಾರಿ ಮಕ್ಕಳ ಮೇಲಿದೆ ಎಂದು ಹೇಳಿದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಕಾರ್ಯದರ್ಶಿ ರಾಮಣ್ಣ ನಾಯಕ ಮಾತನಾಡಿ, ಶಿಕ್ಷಣದ ಮೂಲಕ ಸಮಾಜದಲ್ಲಿ ಉತ್ತಮ ನಾಗರಿಕರನ್ನು ರೂಪಿಸುವುದು ಸಂಸ್ಥೆಯ ಧ್ಯೇಯವಾಗಿದೆ ಎಂದರು. ಕಾಲೇಜು ಪ್ರಾಚಾರ್ಯ ಲಕ್ಷ್ಮಣ ಕರ್ಲಿ ಪ್ರಾಸ್ತಾವಿಕ ನುಡಿ ನೀಡಿ, ಕಾಲೇಜಿನ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ಸಾಧನೆಗಳ ಕುರಿತು ವಾರ್ಷಿಕ ವರದಿಯನ್ನು ವಾಚಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹನುಮಂತಪ್ಪ ಮುದ್ದಾಪುರ, ಗ್ಯಾರಂಟಿ ಯೋಜನೆ ಅಧ್ಯಕ್ಷ ಮಹೇಬೂಬ ಸಾಬ ಮುದ್ದಾಪುರ, ಪಾಲಕ ಪ್ರತಿನಿಧಿಗಳಾದ ಕಟ್ಟಿಬಸಪ್ಪ ಎಲೆಕೂಡ್ಲಿಗಿ, ಮುದಕಪ್ಪ ಕೋಳಬಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ದೀಪಾ, ಯಲ್ಲಮ್ಮ, ಮಮತಾ, ಹುಲಿಗೆಮ್ಮ ಹಾಗೂ ಉಪನ್ಯಾಸಕರಾದ ಹುಸೇನಬಾಷ, ಶಂಕ್ರಪ್ಪ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿ ಕಾಲೇಜಿನ ಶೈಕ್ಷಣಿಕ ವಾತಾವರಣವನ್ನು ಶ್ಲಾಘಿಸಿದರು. ಉಪನ್ಯಾಸಕರಾದ ಸೋಮನಾಥ, ವಿಜಯಲಕ್ಷ್ಮಿ, ಅಕ್ಕಮಹಾದೇವಿ, ಬಸಲಿಂಗಪ್ಪ, ಶ್ರೀಕಾಂತ ಹಾಗೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಸಚಿವರಾದ ಎನ್.ಎಸ್.ಭೋಸರಾಜು ರಾಯಚೂರು ಜಿಲ್ಲಾ ಪ್ರವಾಸ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಭೋಸರಾಜು ಅವರು ಫೆ.01ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.**



ಅಂದು ಬೆಳಿಗ್ಗೆ 11.10ಕ್ಕೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಗ್ಗೆ 11.40ಕ್ಕೆ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಬಂಡೊಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹೆಲಿಪ್ಯಾಡ್‌ಗೆ ಆಗಮಿಸುವರು. ಅಲ್ಲಿಂದ ರಸ್ತೆ ಮಾರ್ಗವಾಗಿ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನಕ್ಕೆ ಆಗಮಿಸಿ, ಶ್ರೀಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದಿಂದ ಆಯೋಜಿಸಿರುವ ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನದಲ್ಲಿ ಮುಖ್ಯಮಂತ್ರಿಗಳೊಂದಿಗೆ ಭಾಗಿಯಾಗುವರು. ಮಧ್ಯಾಹ್ನ 3.30ಕ್ಕೆ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದಿಂದ ನಿರ್ಗಮಿಸಿ, ಬಂಡೊಳ್ಳಿ ಗ್ರಾಮದ ಹೆಲಿಪ್ಯಾಡದಿಂದ ಕಲಬುರಗಿ ವಿಮಾನ ನಿಲ್ದಾಣಕ್ಕೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರ ಸಚಿವ ಪ್ರಲ್ಹಾದ ಜೋಶಿಗೆ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ರಜಪೂತ ಸಮಾಜದ ವತಿಯಿಂದ ಪ್ರತಿಷ್ಠಾಪನೆಗೊಂಡಿರುವ ಮಹಾರಾಣಾ ಪ್ರತಾಪ್ ಸಿಂಹ ಅವರ ಮೂರ್ತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಕೇಂದ್ರ ಗ್ರಾಹಕ ವ್ಯವಹಾರಗಳು ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ ಜೋಶಿ ಇವರಿಗೆ ಶುಕ್ರವಾರ ಆಮಂತ್ರಣ ನೀಡಲಾಯಿತು.**

ಬಿಜೆಪಿ ಜಿಲ್ಲಾ ನಿಕಟ ಪೂರ್ವ ಅಧ್ಯಕ್ಷ ಆರ್ ಎಸ್ ಪಾಟೀಲ ಕೂಚಬಾಳ ಅವರ ನೇತೃತ್ವದ ಸ್ಥಳೀಯ ರಜಪೂತ ಸಮಾಜದ ನಿಯೋಗವು ಕೇಂದ್ರ ಸಚಿವ ಜೋಶಿ ಅವರ ಹುಬ್ಬಳ್ಳಿಯ ಗೃಹದಲ್ಲಿ ಭೇಟಿ ಮಾಡಿ ಅವರನ್ನು ಕಾರ್ಯಕ್ರಮಕ್ಕೆ ಆಮಂತ್ರಿಸಿ ಅವರ ಜೊತೆ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಮಾಜಿ ಕೇಂದ್ರ ಸಚಿವ ಅನುರಾಗ ಠಾಕೂರ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನೂ ಕರೆ ತರಲು ವಿನಂತಿಸಿಕೊಂಡರು.



ನಿಯೋಗದ ವಿನಂತಿಗೆ ಸ್ಪಂದಿಸಿ ಮಾತನಾಡಿದ ಕೇಂದ್ರ ಸಚಿವ ಜೋಶಿ ಅವರು ಇವರೆಲ್ಲರಿಗೂ ಆಮಂತ್ರಿಸಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮಾಡಲು ಶಕ್ತಿಮೀರಿ ಪ್ರಯತ್ನಿಸುತ್ತೇನೆ ಎಂದರು.

ರಾಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ,ಉಪಾಧ್ಯಕ ರತನಸಿಂಗ್ ಕೊಕಟನೂರ,ಪ್ರಕಾಶ ಹಜೇರಿ,ಭರತ ವಿಜಾಪುರ, ಜೆ.ಎಸ್.ಜಿ.ಸಂಸ್ಥೆಯ ಕಾರ್ಯದರ್ಶಿ ಶ್ರೀಕಾಂತ ಪತ್ತಾರ, ಜೈಸಿಂಗ್ ಮೂಲಿಮನಿ, ಸುರೇಶ ಹಜೇರಿ,ಸಿರಸಕುಮಾರ ಹಜೇರಿ, ಪ್ರಭು ರಾಮನಗೌಡ, ಪ್ರಲ್ಹಾದ ಹಜೇರಿ,ವಿಠಲಸಿಂಗ್ ಹಜೇರಿ, ರವಿ ಕಟ್ಟಿಮನಿ, ವಿಠಲಸಿಂಗ್ ಬೆಕಿನಾಳ, ಕುಮಾರ ಹಜೇರಿ, ಅರುಣ ದಡೇದ ಮತ್ತೀತರರು ಇದ್ದರು.

## ಗಣರಾಜ್ಯೋತ್ಸವದಲ್ಲಿ ಡಾ. ಅಂಬೇಡ್ಕರ್ ಭಾವಚಿತ್ರ ಇರದ ಆರೋಪ ದಲಿತ ಸೇನೆಯಿಂದ ಜಿಲ್ಲಾಧಿಕಾರಿಗಳಿಗೆ ದೂರು



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಶ್ರೀ ನಗರೇಶ್ವರ ದೇವಸ್ಥಾನದ ಆವರಣದಲ್ಲಿ ಜನವರಿ 26ರಂದು ಆರ್ಯವೈಶ್ಯ ಸಮಾಜದ ವತಿಯಿಂದ ಆಯೋಜಿಸಲಾದ ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾರತದ ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ಅಳವಡಿಸದೇ ಧ್ವಜಾರೋಹಣ ನಡೆಸಲಾಗಿದೆ ಎಂದು ಆರೋಪಿಸಿ ಜನಸೇವಾ ಫೌಂಡೇಶನ್ ನ ತಾಲೂಕು ಘಟಕದ ಪದಾಧಿಕಾರಿಗಳು ಮನವಿ ಸಲ್ಲಿಸಿದರು.**

ಈ ಕುರಿತು ಮಾತನಾಡಿದ ಜನಸೇವಾ ಫೌಂಡೇಶನ್ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಅವರು, ಗಣರಾಜ್ಯೋತ್ಸವದಂತಹ ರಾಷ್ಟ್ರೀಯ ಹಬ್ಬಗಳಲ್ಲಿ ಸಂವಿಧಾನದ ಪಿತಾಮಹರ ಭಾವಚಿತ್ರವನ್ನು ಗೌರವಪೂರ್ವಕವಾಗಿ ಅಳವಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಆದರೆ ಈ ಕಾರ್ಯಕ್ರಮದಲ್ಲಿ ಭಾವಚಿತ್ರ ಇರದಿರುವುದು ಗಂಭೀರ ನಿರ್ಲಕ್ಷ್ಯವಾಗಿದ್ದು, ಇದು ಸಂವಿಧಾನದ ಮೌಲ್ಯಗಳಿಗೆ ಧಕ್ಕೆಯಾಗಿದೆ ಎಂದು ಹೇಳಿದರು. ಇದೇ ವೇಳೆ ತಾಲೂಕು ಪ್ರಧಾನ ಕಾರ್ಯದರ್ಶಿ ವಾಸುದೇವ ಅವರು ಮಾತನಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋ ದೃಶ್ಯಗಳಲ್ಲಿ ಅಂಬೇಡ್ಕರ್ ಅವರ ಭಾವಚಿತ್ರ ಕಾಣಿಸದಿರುವುದು ಸ್ಪಷ್ಟವಾಗಿದೆ. ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ರಾಷ್ಟ್ರೀಯ ಹಬ್ಬಗಳ ಸಂದರ್ಭದಲ್ಲಿ ಅಗತ್ಯ ಗೌರವ ಪಾಲಿಸಬೇಕು.

ಈ ಹಿನ್ನೆಲೆಯಲ್ಲಿ ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪು ಸಾಬೀತಾದಲ್ಲಿ ಸಂಬಂಧಪಟ್ಟ ಆಯೋಜಕರು ಹಾಗೂ ಹೊಣೆಗಾರ ಅಧಿಕಾರಿಗಳ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಿಗೆ ಮಾನ್ವಿ ತಹಸೀಲ್ದಾರರ ಮುಖಾಂತರ ಮನವಿ ಸಲ್ಲಿಸಲಾಗಿದ್ದು, ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಜಿಲ್ಲೆಯ ಎಲ್ಲಾ ಸಂಘಟನೆಗಳಿಗೆ ಸ್ಪಷ್ಟ ಮಾರ್ಗಸೂಚಿಗಳನ್ನು ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಸಂವಿಧಾನಕ್ಕೆ ಗೌರವ ಹಾಗೂ ಸಾರ್ವಜನಿಕ ಶಾಂತಿ ಕಾಪಾಡುವ ನಿಟ್ಟಿನಲ್ಲಿ ತಕ್ಷಣ ಕ್ರಮ ಕೈಗೊಳ್ಳುವಂತೆ ಅವರು ವಿನಂತಿಸಿದ್ದಾರೆ. ಈ ಸಂದರ್ಭದಲ್ಲಿ ಜನಸೇವಾ ಫೌಂಡೇಶನ್ ಉಪಾಧ್ಯಕ್ಷರಾದ ರಾಜಾಸಾಬ್, ಹಸನ್, ಗೋಕುಲ ಸಾಬ್, ಆಜೀತ್, ಸಿದ್ದರೆಡ್ಡಿ ಸೇರಿದಂತೆ ಇನ್ನಿತರರು ಇದ್ದರು.

## ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ಪಾಲಿಸಬೇಕು: ಜಿಲ್ಲಾಧಿಕಾರಿ ನಿತೀಶ್ ಕೆ ಸಲಹೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ ರಾಯಚೂರು, ಎನ್‌ಹೆಚ್‌ಎಐ ಪ್ರಾದೇಶಿಕ ಕಚೇರಿ ಬೆಂಗಳೂರು ಹಾಗೂ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸ-2026ರ ಅಂಗವಾಗಿ ರಸ್ತೆ ಅಪಘಾತಗಳನ್ನು ತಡೆಗಟ್ಟುವ ಮತ್ತು ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಿನೂತನ ಜಾಗೃತಿ ಅಭಿಯಾನ ನಡೆಯಿತು.**

ಈ ಕಾರ್ಯಕ್ರಮದ ಭಾಗವಾಗಿ ಜನವರಿ 31ರಂದು ಶನಿವಾರ ದಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಯಚೂರಿನ ವಿವಿಧ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತವಾಗಿ ಹೆಲ್ಮೆಟ್‌ಗಳನ್ನು ವಿತರಿಸಲಾಯಿತು. ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕಾರ್ಯಕ್ರಮದಲ್ಲಿ ಐಎಸ್‌ಐ ಗುರುತಿನ ಹೆಲ್ಮೆಟ್‌ಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಮಾತನಾಡಿ, ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ಪಾಲಿಸಬೇಕು ಮತ್ತು ಹೆಲ್ಮೆಟ್ ಧರಿಸುವ ಮಹತ್ವ ಅರಿಯಬೇಕು. ನ್ಯಾಷನಲ್ ಹೈವೇ ಕಡೆಯಿಂದ ನಮ್ಮ ಜಿಲ್ಲೆಯ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಹೆಲ್ಮೆಟ್ ಉಚಿತವಾಗಿ ನೀಡಲಾಗುತ್ತಿದ್ದು, ಅದನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕೆಂದರು.



ಹೆಲ್ಮೆಟ್ ಧರಿಸದೇ ತಲೆಗೆ ಪೆಟ್ಟು ಬಿದ್ದು ಜೀವ ಕಳೆದುಕೊಂಡ ಹೆಚ್ಚಿನ ಪ್ರಕರಣಗಳು ನಮ್ಮ ಜಿಲ್ಲೆಯಲ್ಲಿ ದಾಖಲಾಗಿವೆ. ಜೀವ ರಕ್ಷಣೆ ಮತ್ತು ಕುಟುಂಬದ ಭದ್ರತೆಗೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸಂಚಾರ ನಿಯಮಗಳನ್ನು ಪಾಲನೆ ಮಾಡಬೇಕು. ನಗರದಲ್ಲಿ ಹೆದ್ದಾರಿ ಹೋಗಿದ್ದರಿಂದ ಲಾರಿ, ಟಿಪ್ಪರ್, ದೊಡ್ಡ ಪ್ರಮಾಣದ ಬಾರಿ ವಾಹನಗಳ ಸಂಚಾರದಿಂದ ಜೊತೆಗೆ ಸಂಚಾರ ನಿಯಮಗಳನ್ನು ಸರಿಯಾಗಿ ಪಾಲನೆ ಮಾಡದ ಕಾರಣಕ್ಕಾಗಿ ಹಾಗೂ ಹೆಲ್ಮೆಟ್ ಇಲ್ಲದೆ ಸಂಚಾರ ಮಾಡುತ್ತಿದ್ದರಿಂದ ಅಪಘಾತದಲ್ಲಿ ಸಾವುಗಳಾಗುತ್ತಿವೆ ಎಂದರು.

ನಗರದಲ್ಲಿ ಬಾರಿ ವಾಹನಗಳ ಸಂಚಾರ ತಡೆಗಾಗಿ ನಗರದ ಹೊರಗಡೆ ರಿಂಗ್ ರಸ್ತೆಗೆ ಈಗಾಗಲೇ ಟೆಂಡರ್ ಹಂತದಲ್ಲಿದ್ದು, ತ್ವರಿತವಾಗಿ ಕೈಗೊಳ್ಳಲಾಗುತ್ತದೆ. ಕಳೆದು ಹೋದ ಜೀವ ಯಾವತ್ತಿಗೂ ಬರುವುದಿಲ್ಲ. ತಮ್ಮನ್ನು ನಂಬಿಕೊಂಡಿರುವ ಕುಟುಂಬದ ಆಧಾರವಾಗಿರುವ ತಾವುಗಳು ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿಯೇ ವಾಹನ ಚಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು. ಈ ವೇಳೆ, ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಮಾತನಾಡಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ



500 ಹೆಲ್ಮೆಟ್ ವಿತರಣೆ ಮಾಡುತ್ತಿದ್ದು, ಹೆಲ್ಮೆಟ್ ಪಡೆದವರು ಕಡ್ಡಾಯವಾಗಿ ಧರಿಸಬೇಕು.

ಹೆಲ್ಮೆಟ್ ಪಡೆದವರ ಹೆಸರು ಮತ್ತು ವಿಳಾಸ ನಮೂದಿಸಿಕೊಂಡಿದ್ದು, ಹೆಲ್ಮೆಟ್ ಇಲ್ಲದೆ ಸಂಚಾರ ಮಾಡಿದ ಸಂದರ್ಭದಲ್ಲಿ ಪೊಲೀಸ್ ಕೈಗೆ ಸಿಕ್ಕಲ್ಲಿ ಹೆಲ್ಮೆಟ್ ಹಾಕದೇ ಇರುವುದಕ್ಕೆ ದಂಡದ ಜೊತೆಗೆ ಹೆಲ್ಮೆಟ್ ಪಡೆದುಕೊಂಡು ಹಾಕದೇ ಇರುವುದಕ್ಕೆ ಮತ್ತೊಂದು ದಂಡ ಹಾಕಲಾಗುತ್ತದೆ ಎಂದರು. ರಸ್ತೆ ನಿಯಮಗಳನ್ನು ಕಡ್ಡಾಯ ಪಾಲನೆ ಮಾಡಬೇಕು. ಅಪಘಾತದಲ್ಲಿ ವಾಹನ ಚಾಲನೆ ಪರವಾಗಿ ಇಲ್ಲದೆ ಸಾವಿನಪ್ಪಿದರೆ ದೊಡ್ಡ ಪ್ರಮಾಣದ ದಂಡದ ಜೊತೆಗೆ ಕ್ರಿಮಿನಲ್ ಪ್ರಕರಣ ದಾಖಲಾಗುತ್ತದೆ. ಎಫ್‌ಐಆರ್ ದಾಖಲಾದಲ್ಲಿ ವಿದ್ಯಾಭ್ಯಾಸ ಮತ್ತು ಉದ್ಯೋಗಕ್ಕೆ ತೊಂದರೆ ಉಂಟಾಗುತ್ತದೆ ಎಂದರು. ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮಹೊಪಾತ್ರ ಅವರು ಮಾತನಾಡಿ, ರಸ್ತೆ ಅಪಘಾತದಲ್ಲಿ ಹೆಲ್ಮೆಟ್ ಇಲ್ಲದೇ ಜೀವ ಕಳೆದುಕೊಳ್ಳುವುದು ಹೆಚ್ಚಿದೆ. ರಸ್ತೆ ಸಂಚಾರದ ಸಮಯದಲ್ಲಿ ಯುವಕರು ಹೆಚ್ಚಾಗಿ ಬೈಕ್ ವೀಲಿಂಗ್ ಮಾಡುತ್ತಿರುವುದು ಗಮನಿಸಿದ್ದೇನೆ. ಇದನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಖುಷಿ ಪಡುತ್ತಿದ್ದಾರೆ. ಅಚಾತುರ್ಯ ಉಂಟಾದಲ್ಲಿ ಹೋದ ಜೀವ ಬರೋದಿಲ್ಲ.

ಯುವಕರು ಇಂತಹ ಸಾಹಸ ಮಾಡುವುದು ಬಿಡಬೇಕು ಎಂದರು. ಈ ವೇಳೆ ರಾಯಚೂರು ಡಿವೈ.ಎಸ್.ಪಿ ಶಾಂತವೀರ ಅವರು ಮಾತನಾಡಿ, ಯುವಕ ಹಾಗೂ ಯುವತಿಯರು ತಮ್ಮ ಇಷ್ಟದ ಮೊಬೈಲ್ ಹಾಳಾಗದಂತೆ ಕವರ್ ಹಾಕಿಸುತ್ತೀರಿ. ಅದಕ್ಕಿಂತ ದೊಡ್ಡದು ನಿಮ್ಮ ಜೀವನ ಉಳಿಸುವ ಹೆಲ್ಮೆಟ್ ಧರಿಸಿ ಸಂಚಾರ ನಿಯಮಗಳನ್ನು ಪಾಲನೆ ಮಾಡಬೇಕು. ರಸ್ತೆ ಅಪಘಾತದಲ್ಲಿ ಶೇ.70 ರಷ್ಟು ಹೆಲ್ಮೆಟ್ ಇಲ್ಲದೆ ಜೀವನ ಕಳೆದುಕೊಂಡಿದ್ದಾರೆ. ಕರ್ನಾಟಕದಲ್ಲಿ ಪ್ರತಿ ವರ್ಷ 12 ರಿಂದ 13 ಸಾವಿರ ಜನರು ರಸ್ತೆ ಅಪಘಾತಕ್ಕೆ ಈಡಾಗುತ್ತಿದ್ದಾರೆ ಎಂದರು. ಇದೇ ಫೆಬ್ರುವರಿ 05, 06 ಹಾಗೂ 07ರಂದು ನಡೆಯುವ ರಾಯಚೂರು ಉತ್ಸವಕ್ಕೆ ಎಲ್ಲರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಆಗಮಿಸಬೇಕು. ಪಾರ್ಕಿಂಗ್ ನಿಗದಿಪಡಿಸಿದ ಸ್ಥಳದಲ್ಲಿ ಮಾತ್ರ ವಾಹನಗಳನ್ನು ನಿಲ್ಲಿಸಬೇಕೆಂದು ಹೇಳಿದರು. ಇದೇ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ, ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರಾದ ಭಾವನೇಶ ಕುಮಾರ ಗುಪ್ತಾ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಪ್ರಭಾರಿ ರಿಜಿಸ್ಟರ್ ಗುರುರಾಜ ಬಿರಾದಾರ್, ಸಿಓಎಲ್ ಯೋಜನಾ ನಿರ್ದೇಶಕರಾದ ಎಮ್.ಡಿ.ಯೂಸೂಫ್ ಸೇರಿದಂತೆ ಅನೇಕರು ಇದರು.


## ನೇಮಕಾತಿ ಪ್ರಕಟಣೆ

ಬ್ಯಾಂಕ್ ಆಫ್ ಬರೋಡಾ ನೇಮಕಾತಿ 2026 ರಲ್ಲಿ 23 ಸಹಾಯಕ ಉಪಾಧ್ಯಕ್ಷ, ಉಪ ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಲಾಗುತ್ತದೆ. ಬಿ.ಟೆಕ್/ಬಿ.ಇ, ಎಂ.ಇ/ಎಂ.ಟೆಕ್, ಎಂಸಿಎ ಹೊಂದಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಅರ್ಜಿಯು 30-01-2026 ರಂದು ಪ್ರಾರಂಭವಾಗುತ್ತದೆ ಮತ್ತು 19-02-2026 ರಂದು ಮುಕ್ತಾಯಗೊಳ್ಳುತ್ತದೆ. ಅಭ್ಯರ್ಥಿಯು ಬ್ಯಾಂಕ್ ಆಫ್ ಬರೋಡಾ ವೆಬ್‌ಸೈಟ್ https://bankofbaroda.bank.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.

## ಫೆ.2ರಿಂದ ಜಿಲ್ಲಾ ಉತ್ಸವದ ಮಕ್ಕಳ ಹಬ್ಬಕ್ಕೆ ಅಭೂತಪೂರ್ವ ಪ್ರಚಾರ, ಪ್ರೋತ್ಸಾಹ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಫೆಬ್ರವರಿ 02 ಹಾಗೂ 03ರಂದು ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಹಮ್ಮಿಕೊಂಡ ಮಕ್ಕಳ ಹಬ್ಬ-2026ರ ಕಾರ್ಯಕ್ರಮಕ್ಕೆ ಜಿಲ್ಲೆಯಾದ್ಯಂತ ಎಲ್ಲಾ ಶಾಲೆಗಳ ವಿದ್ಯಾರ್ಥಿಗಳಿಂದ ಅಭೂತಪೂರ್ವ ಪ್ರಚಾರ ಮತ್ತು ಪ್ರೋತ್ಸಾಹ ವ್ಯಕ್ತವಾಗಿದೆ.**




ಎಡೆದೊರೆ ನಾಡು, ಚಿನ್ನದ ನಾಡು ರಾಯಚೂರು ಉತ್ಸವದ ನಿಮಿತ್ತ ಫೆಬ್ರವರಿ 2ನೇ ಹಾಗೂ 3ನೇ ದಿನಾಂಕದಂದು ಮಕ್ಕಳ ಹಬ್ಬ ಹಾಗೂ ಕೆರೆ ಹಬ್ಬ ಹಮ್ಮಿಕೊಂಡಿದ್ದು ಎಲ್ಲರೂ ಮಕ್ಕಳೊಂದಿಗೆ ಭಾಗವಹಿಸಿ ಕಾರ್ಯಕ್ರಮದ ಸೊಬಗನ್ನು ಹೆಚ್ಚಿಸಬೇಕಾಗಿ ಕೋರುತ್ತಾ ಎಲ್ಲ-ರಿಗೂ ರಾಯಚೂರು ಉತ್ಸವದ ಮಕ್ಕಳ ಹಬ್ಬ, ಕೆರೆ ಹಬ್ಬ ಹಾಗೂ ರಾಯಚೂರು ಉತ್ಸವದ ಅಂಗವಾಗಿ ನಡೆಯುತ್ತಿರುವ ಎಲ್ಲಾ ಕಾರ್ಯಕ್ರಮಗಳಿಗೆ ಆತ್ಮೀಯವಾಗಿ ಸ್ವಾಗತಿಸುತ್ತೇವೆ. ನಮ್ಮ ರಾಯಚೂರು ನಮ್ಮ ಹೆಮ್ಮೆ' ಎಂದು ಬೇರೆ ಬೇರೆ ಶಾಲೆಗಳ ಮಕ್ಕಳು ವಿಡಿಯೋ ಮೂಲಕ ತಮ್ಮ ಅಭಿಪ್ರಾಯ ತಿಳಿಸಿ, ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಆಹ್ವಾನ ನೀಡುತ್ತಿರುವ ವಿಡಿಯೋಗಳು ವಾಟ್ಸಪ್, ಇನ್‌ಸ್ಟಾಗ್ರಾಂ ಮತ್ತು ಫೇಸಬುಕ್‌ನಂತ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಈ ಮೂಲಕ ಮಕ್ಕಳ ಹಬ್ಬಕ್ಕೆ ಭಾರಿ ಪ್ರಚಾರ ಮತ್ತು ಪ್ರೋತ್ಸಾಹ ವ್ಯಕ್ತವಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಈ ಮಕ್ಕಳ ಹಬ್ಬದಲ್ಲಿ ರೋಬೋಟಿಕ್ ಪ್ರಾಣಿಗಳ ಪ್ರದರ್ಶನ, ಮೆಗಾ ಮ್ಯಾಜಿಕ್ ಸ್ಟಾರ್ ಕುದ್ರೋಳಿ ಗಣೇಶ ಬಳಗದದಿಂದ ವಿಸ್ಮಯ ಜಾದೂ, ಮಜಾ ಟಾಕೀಸ್ ಖ್ಯಾತಿಯ ಅಶೋಕ್ ಪೊಳಲಿಯವರಿಂದ ವಿಭಿನ್ನ ಶೈಲಿಯ ಬೃಹತ್ ಗಾತ್ರದ ಕೋಳಿ ನೃತ್ಯ ಮತ್ತು ಇನ್ನೀತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಶಿಕ್ಷಕರಿಂದ ಭಾರೀ ಪ್ರೋತ್ಸಾಹ: ಕೆಲವು ಶಾಲೆಗಳ ಶಿಕ್ಷಕರು ಬೇರೆ ಬೇರೆ ರೀತಿಯ ವಿಡಿಯೋ ಎಡಿಟಿಂಗ್ ಆ?ಯಪಗಳನ್ನು ಡೌನ್‌ಲೋಡ್ ಮಾಡಿ ಅದರಲ್ಲಿ ತಮ್ಮ ಶಾಲೆಯ ಮಕ್ಕಳ ವಿಡಿಯೋ ಮತ್ತು ಮಕ್ಕಳ ಹಬ್ಬದ ಪೋಸ್ಟರ್ ಅಳವಡಿಸಿ ಅದಕ್ಕೆ ಧ್ವನಿ ನೀಡಿ ಕೆಲವೇ ನಿಮಿಷಗಳ ಚಿಕ್ಕದಾದ ವಿಡಿಯೋಗಳನ್ನು ಅದ್ಭುತವಾಗಿ ಸಿದ್ಧಪಡಿಸಿ, ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರ ಮತ್ತು ಸಾರ್ವಜನಿಕರಿಗೆ ಆತ್ಮೀಯವಾಗಿ ಆಹ್ವಾನ ನೀಡಿರುವ ಪ್ರಯತ್ನಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂತಷ ವ್ಯಕ್ತಪಡಿಸಿದ್ದಾರೆ. ಬೇರೆ ಬೇರೆ ಶಾಲೆಗಳು: ಮಲ್ಲಟದ ಕಸ್ತೂರಿಬಾ ಗಾಂಧಿ ಬಾಲಿಕಾ ವಿದ್ಯಾರ್ಥಿನಿಯರು, ರಾಯಚೂರಿನ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ವಿದ್ಯಾರ್ಥಿಗಳು, ನೇತಾಜಿ ಪೂರ್ವ ಪ್ರಾಥಮಿಕ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮಕ್ಕಳು, ಉಡಮಗಲ್ ಖಾನಾಪುರ ಸರ್ಕಾರಿ ಪ್ರೌಢಶಾಲೆಯ ಮಕ್ಕಳು ಸೇರಿದಂತೆ ಬೇರೆ ಬೇರೆ ಶಾಲೆಗಳ ವಿದ್ಯಾರ್ಥಿಗಳ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತ ಕಾರ್ಯಕ್ರಮದ ಮೆರುಗು ಹೆಚ್ಚಿಸಿವೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಯದ್ದಲದೊಡ್ಡಿ ಗ್ರಾಮದ ರಸ್ತೆ ಅಗಲೀಕರಣಕ್ಕೆ ಮಾನ್ಯ ಶಾಸಕರಿಗೆ ಮನವಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು:** ಮತಕ್ಷೇತ್ರದ ವ್ಯಾಪ್ತಿಯ ಯದ್ದಲದೊಡ್ಡಿ ಗ್ರಾಮದ ಗ್ರಾಮಸ್ಥರು ರಸ್ತೆ ಅಗಲೀಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಶಾಸಕರಿಗೆ ಮನವಿ ಪತ್ರ ಸಲ್ಲಿಸಿದರು. ಗ್ರಾಮದ ಮುಖ್ಯ ರಸ್ತೆ ಕಿರಿದಾಗಿರುವುದರಿಂದ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದ್ದು, ಮಳೆಗಾಲದಲ್ಲಿ ಕೆಸರು ಮತ್ತು ನೀರು ನಿಲ್ಲುವ ಸಮಸ್ಯೆಯಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಗ್ರಾಮದ ಶಾಲಾ ವಿದ್ಯಾರ್ಥಿಗಳು, ರೈತರು ಹಾಗೂ ದೈನಂದಿನ ಪ್ರಯಾಣಿಕರು ಇದೇ ರಸ್ತೆಯನ್ನು ಅವಲಂಬಿಸಿರುವುದರಿಂದ



ತುರ್ತು ವಾಹನಗಳ ಸಂಚಾರಕ್ಕೂ ತೊಂದರೆ ಉಂಟಾಗುತ್ತಿದೆ. ಕಳೆದ ಹಲವು ವರ್ಷಗಳಿಂದ ರಸ್ತೆ ಅಗಲೀಕರಣದ ಬೇಡಿಕೆ ಇತ್ತರೂ ಇನ್ನೂ ಕಾರ್ಯಾರಂಭವಾಗದಿರುವುದರಿಂದ ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು. ರಸ್ತೆ ಅಗಲೀಕರಣದ ಜೊತೆಗೆ ಚರಂಡಿ ವ್ಯವಸ್ಥೆ ಹಾಗೂ ಬದಿಯ ಭದ್ರತಾ ಕಾಮಗಾರಿಗಳನ್ನು ಕೂಡ ಕೈಗೊಳ್ಳುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಶಾಸಕರು ಅನುಪಸ್ಥಿತರಿದ್ದ ಹಿನ್ನೆಲೆಯಲ್ಲಿ ಅವರ ಪರವಾಗಿ ರಾಜುಗೌಡ ಬಾದರ್ಲಿ ಅವರು ಮನವಿ ಪತ್ರವನ್ನು ಸ್ವೀಕರಿಸಿ, ಗ್ರಾಮಸ್ಥರ ಅಹವಾಲನ್ನು ಗಮನದಿಂದ ಆಲಿಸಿದರು. ಈ ವಿಷಯವನ್ನು ಮಾನ್ಯ ಶಾಸಕರ ಗಮನಕ್ಕೆ ತಂದು, ಸಂಬಂಧಪಟ್ಟ ಇಲಾಖೆ ಅಧಿಕಾ-ರಿಗಳೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಹಿರಿಯರು, ಯುವಕರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು. ರಸ್ತೆ ಅಗಲೀಕರಣ ಕಾರ್ಯ ಶೀಘ್ರ ಆರಂಭವಾದರೆ ಗ್ರಾಮಕ್ಕೆ ಸಂಚಾರ ಸೌಲಭ್ಯ ಸುಧಾರಿಸಲಿದೆ ಎಂದು ಗ್ರಾಮಸ್ಥರು ಆಶಾಭಾವ ವ್ಯಕ್ತಪಡಿಸಿದರು.

# ಇಂದು (ಫೆ.1) ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಹಂಡೇ ವಜೀರ ಸಮಾಜ ವಿಜಯಪುರ ಹಾಗೂ ತಾಳಿಕೋಟಿ ತಾಲೂಕ ಘಟಕದ ಸಹಯೋಗದಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಹಂಡೇ ವಜೀರ ಸಮಾಜದ ವಿದ್ಯಾರ್ಥಿಗಳ ಹಾಗೂ ಸಾಧಕರ ಸನ್ಮಾನ ಸಮಾರಂಭ ಇಂದು ನಡೆಯಲಿದೆ.**

ಪಟ್ಟಣದ ಶ್ರೀ ಖಾಸ್ಗತೇಶ್ವರ ಸಭಾಭವನದಲ್ಲಿ ಮುಂಜಾನೆ 11 ಘಂಟೆಗೆ ನಡೆಯಲಿರುವ ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಹಿರೂರ ಶ್ರೀ ಅನ್ನದಾನೇಶ್ವರ ಹಿರೇಮಠದ ಷ.ಬ್ರ.ಶ್ರೀ ಜಯ ಗುರು ಸಿದ್ದೇಶ್ವರ ಮಹಾಸ್ವಾಮಿಗಳು, ಕಲಕೇರಿ ಗದ್ದಗಿಮಠದ ಷ.ಬ್ರ.ಶ್ರೀ ಗುರು ಮಡಿವಾಳೇಶ್ವರ ಶಿವಾಚಾರ್ಯರು, ತಾಳಿಕೋಟಿಯ ಶ್ರೀ ಸಿದ್ದಲಿಂಗ ದೇವರು, ಕರಿಭಂಟನಾಳದ ಪೂಜ್ಯ ಶ್ರೀ ಶಿವಕುಮಾರ ಮಹಾಸ್ವಾಮಿಗಳು ವಹಿಸುವರು.ವೀ.ಲಿಂ.ಹಂ.ವ.ಸಮಾಜದ




ರಾಜ್ಯಾಧ್ಯಕ್ಷ ಡಾ.ಎಸ್.ಎಸ್.ಪಾಟೀಲ ಅಧ್ಯಕ್ಷತೆ ವಹಿಸುವರು.ವೀ.ಲಿಂ.ಹಂ.ಸ. ತಾಳಿಕೋಟಿ ತಾಲೂಕಾ ಅಧ್ಯಕ್ಷ ರಾಮನಗೌಡ ಸಂ.ಬಿರಾದಾರ(ಕರಭಂಟನಾಳ) ಇವರ ಗೌರವ ಉಪಸ್ಥಿತಿ ಇರುವುದು. ಮುದ್ದೇಬಿಹಾಳ ಶಾಸಕ,ಕೆ.ಎಸ್.ಡಿ.ಎಲ್. ಅಧ್ಯಕ್ಷ ಅಪ್ಪಾಜಿ ನಾಡಗೌಡ ಹಾಗೂ ದೇ.ಹಿ.ಶಾಸಕ ರಾಜುಗೌಡ ಪಾಟೀಲ ಸಮಾರಂಭ ಉದ್ಘಾಟಿಸುವರು.

ಭಾ.ಜ.ಪ.ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ(ನಡಹಳ್ಳಿ) ಹಾಗೂ ಮಾಜಿ ಶಾಸಕ ಸೋಮನಗೌಡ ಎಸ್ ಪಾಟೀಲ(ಸಾಸನೂರ) ಕ್ಯಾಲೆಂಡರ್ ಬಿಡುಗಡೆ ಮಾಡುವರು.ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಆರ್. ಎಸ್.ಪಾಟೀಲ (ಕೂಚಬಾಳ) ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಲಿಂಗದಳ್ಳಿ ಭಾವಚಿತ್ರಕ್ಕೆ ಪುಷ್ಪಾರ್ಚನೆ, ಅರ್ಪಿಸುವರು. ಮುಖ್ಯ ಅತಿಥಿಗಳಾಗಿ ಕಲಬುರಗಿ ಚಾ.ಸಂ.ಅ.ಪೀಠದ ಅಧ್ಯಕ್ಷ ಜಿ.ಎನ್.ಪಾಟೀಲ, ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಮಂಜುಳಾ ಈ.ರೇವಡಿ, ಸ.ರಾ.ಪ್ರ.ಕಾರ್ಯದರ್ಶಿ ಆರ್. ಎಸ್.ಪಾಟೀಲ (ಅಗಸಬಾಳ), ಹಂಡೇ ವಜೀರ ಸಮಾಜದ ಜಿಲ್ಲಾಧ್ಯಕ್ಷ ಸಂಗನಗೌಡ ಕರಭಂಟನಾಳ,ವೀ.ಲಿಂ.ಹಂ.ವ.ಸ. ಬಾಗಲಕೋಟ ಅಧ್ಯಕ್ಷ ವಿ.ಕೆ.ಪಾಟೀಲ,ವಿಡಿಸಿಸಿ ಬ್ಯಾಂಕ ನಿರ್ದೇಶಕ ಬಿ.ಎಸ್.ಪಾಟೀಲ (ಯಾಳಗಿ), ವೀ.ಲಿಂ.ಮ.ತಾ. ಅಧ್ಯಕ್ಷ ಎಚ್-ಎಸ್ ಪಾಟೀಲ, ವೀ.ಲಿಂ.ಪಂ.ಸ. ಅಧ್ಯಕ್ಷ ಡಾ.ವಿ.ಎಸ್.ಕಾರ್ಚಿ,ವೀ.ವಿ.ಸಂ.ತಾ. ಅಧ್ಯಕ್ಷ ವಿ.ಸಿ.ಹಿರೇಮಠ,ಕಸಾಪ ಅಧ್ಯಕ್ಷ ಆರ್.ಎಲ್. ಕೊಪ್ಪದ ಆಗಮಿಸುವರು,ಕಲಬುರಗಿ ಸಂಶೊಧಕ ಡಾ.ಡಿ.ಎನ್.ಪಾಟೀಲ, ಧಾರವಾಡ ಸಂಶೋಧಕ ಎಸ್.ಸಿ.ಪಾಟೀಲ,ಸ.ನಿ.ಅ.ದಾ. ಡಾ.ಎಂ. ಎಂ.ಬೆಳಗಲ್ ಉಪನ್ಯಾಸ ನೀಡುವರು. ಹಂಡೇ ವಜೀರ ಸಮಾಜದ ಬೆಂಗಳೂರು ಗೌರವಾಧ್ಯಕ್ಷ ಎಸ್ ಆರ್ ದೇಸಾಯಿಗೌಡ್ರ, ಮಾಜಿ ರಾಜ್ಯಾಧ್ಯಕ್ಷ ಬಿಎಸ್ ಪಾಟೀಲ, ಉಪಾಧ್ಯಕ್ಷ ಎಸ್ ಜಿ ಪಾಟೀಲ,ಆರ್.ಬಿ. ಮ್ಯಾಗೇರಿ, ಶಂಕರ ಗೌಡ ರಾಯ್ಗೊಂಡ್, ಬಾಪುಗೌಡ ಬಿರಾದಾರ, ಎಸ್.ಜಿ.ಬಳವಾಟ,ಮಾಜಿ ಪ್ರಧಾನ ಸಂಗನಗೌಡ ಪಾಟೀಲ, ಗೌರವ ಅಧ್ಯಕ್ಷ ಕೆ ಎಸ್ ಗೌಡರ, ಮುದ್ದೇಬಿಹಾಳ ಅಧ್ಯಕ್ಷ ಎಂ.ಬಿ.ಬಿರಾದಾರ,ಬ.ಬಾಗೇವಾಡಿ ಅಧ್ಯಕ್ಷ ಸಿದ್ದನಗೌಡ ಪಾಟೀಲ, ಇಂಡಿ ಅಧ್ಯಕ್ಷ ರಾಜಶೇಖರ ಪಾಟೀಲ ಹಾಗೂ ವಿಜಯಪುರ ಅಧ್ಯಕ್ಷ ಎಸ್ ಎಸ್ ಅವರಾದಿ ಹಾಗೂ ಹಂಡೇ ವಜೀರ ಸಮಾಜದ ಎಲ್ಲಾ ಪ್ರಮುಖರು ಉಪಸ್ಥಿತ ಇರುವವರು.

# ಬಾಲಕ ರೆಹಾನಖಾನ್ ವಠಾರಗೆ ಸನ್ಮಾನ




ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ:** ಪಟ್ಟಣದ ಸರ್ವಜ್ಞ ವಿದ್ಯಾಪೀಠ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ 7 ವರ್ಷದ ಬಾಲಕ ರೆಹಾನಖಾನ್ ಅಯ್ಯೂಬಖಾನ್ ವಠಾರ ಈತನು ಸೈಡ್ ಸಿಟ್ ಅಪ್ ನಲ್ಲಿ ಅತ್ಯುತ್ತಮ ಸಾಧನೆ ಮಾಡುವ ಮೂಲಕ ಇಂಡಿಯಾ ಬುಕ್ ಆಫ್ ರೆಕಾರ್ಡ್ ನಲ್ಲಿ ತನ್ನ ಹೆಸರು ಸೇರ್ಪಡೆ ಆಗುವಂತೆ ಮಾಡಿರುವುದಕ್ಕೆ ಸಂಸ್ಥೆ ವತಿಯಿಂದ ಶುಕ್ರವಾರ ಸನ್ಮಾನಿಸಿ ಗೌರವಿಸಲಾಯಿತು.

ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರ, ಮು.ಗು.ಸಂತೋಷ ಪವಾರ, ತರಬೇತುದಾರ ಲಾಳೆಮಶಾಕ ಮುಲ್ಲಾ, ಶಿಕ್ಷಕರಾದ ಜವಳಗೇರಿ, ಬಸವರಾಜ ಚಳಗಿ,ಶಾಂತಗೌಡ ಬಿರಾದಾರ, ಸಂಜು ಕುಮಾರ ರಾಠೋಡ, ಬಸವರಾಜ ಸವದತ್ತಿ, ರವಿಕುಮಾರ , ರವಿಕುಮಾರ ಮಲಾಬಾದಿ, ರಸೂಲಸಾ ತುರ್ಕಣಗೇರಿ, ಸಿದ್ದನಗೌಡ ಮುದ್ನೂರ, ಭೀಮನಗೌಡ ಸಾಸನೂರ, ಚೇತನ ನಾವದಗಿ, ಸವಿತಾ ಅಸ್ಕಿ,ಶಿವಲೀಲಾ ಚುಂಚೂರು, ರೂಪ ಪಾಟೀಲ, ಸಂಗಮೇಶ ಬಿರಾದಾರ, ಸಂಗೀತ ಬಿರಾದಾರ, ಮೇಘಾ ಪಾಟೀಲ, ಬೋರಮ್ಮ ಉಕ್ಕಲಿ, ಅನಿತಾ ಚೌದ್ರಿ, ಜ್ಯೋತಿ ಪೋಲಿಸ್ ಪಾಟೀಲ, ಶೃತಿ ಚೌದ್ರಿ,ರಾಜಬಿ ಬಿದರಿ, ನಾಗರತ್ನ ಮೈಲೇಶ್ವರ,ಶಿವಕುಮಾರ ಕುಂಬಾರ, ಹೀನಾ ಸನದಿ, ದೇವೇಂದ್ರ ಗುಳೆದ, ಮುಬಾರಕ ಬನ್ನಟ್ಟಿ,ದೇವರಾಜ ದೇಸಾಯಿ, ತನುಶ್ರೀ ಮಹೇಂದ್ರಕರ್ ಸುಮಾ ಹಿರೇಮಠ, ಪ್ರತಿಭಾ ಗುಬ್ಬೇವಾಡ, ಗುರುದೇವಿ ಮಡಿವಾಳರ, ಜೈಯಶ್ರೀ ಹದಿಮೂರ, ಜೈರಾಬಿ ಮುಲ್ಲಾ ಸರ್ವ ಸಿಬ್ಬಂದಿ ವರ್ಗದವರು ಇದ್ದರು.

# ರಾಮಲಿಂಗಯ್ಯ ಶ್ರೀಗಳಿಗೆ ಶಳ್ಳಗಿ ಗ್ರಾಮಸ್ಥರಿಂದ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ:** ತಾಲೂಕಿನ ಚಬನೂರ ಗ್ರಾಮದ ಸಿದ್ದೀಪುರುಷ ಶ್ರೀ ರಾಮಲಿಂಗೇಶ್ವರ ನೂತನ ಮಠ ಹಾಗೂ ಸಭಾಭವನದ ಲೋಕಾರ್ಪಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡ ಪುರಾಣ ಕಾರ್ಯಕ್ರಮದಲ್ಲಿ ಶಳ್ಳಗಿ ಗ್ರಾಮದ ಜಂಗಮ ಸಮಾಜದಿಂದ ಜ್ಯೋತಿಷ್ಯ ರತ್ನ ಶ್ರೀರಾಮಲಿಂಗಯ್ಯ ಮಹಾಸ್ವಾಮಿಗಳಿಗೆ ಅವರ ಆಧ್ಯಾತ್ಮಿಕ ಸೇವೆಗಾಗಿ ಗೌರವ ಸಮರ್ಪಣೆ ಸಲ್ಲಿಸಲಾಯಿತು.

ಕೊಡೆಕಲ್ಲದ ಪೂಜ್ಯ ಶಿವಕುಮಾರ



ಶ್ರೀಗಳು, ನಾವದಗೀಯ ಷ.ಬ್ರ.ಶ್ರೀ ರಾಜಗುರು ರಾಜೇಂದ್ರ ಶಿವಾಚಾರ್ಯರು, ದೇವರ ಹಿಪ್ಪರಗಿ ಪರದೇಶಿ ಮಠದ ಶ್ರೀ ಶಿವಯೋಗಿ ಶಿವಾಚಾರ್ಯರು, ಗಣ್ಯರಾದ ಶರಣಯ್ಯ ಹಿರೇಮಠ, ಹೊಂಬೆಸ್ವಾಮಿ ಹಿರೇಮಠ,ಕಾಶಿರಾಯಗೌಡ ದೇಸಾಯಿ, ಪಂಚಾಕ್ಷರಿ ಹಿರೇಮಠ, ನಾಗಯ್ಯ ಮಠ, ಶರಣಗೌಡ ಪೊಲೀಸ್ ಪಾಟೀಲ (ಕರಿಭಾವಿ), ಡಾ.ಸೋಮಶೇಖರಯ್ಯ ಹಿರೇಮಠ (ಮಿಣಜಗಿ), ಮಲ್ಲಯ್ಯ ಹಿರೇಮಠ ಮತ್ತೀತರರು ಇದ್ದರು.

# ಗೋಮರ್ಸಿ ಗ್ರಾಮದಲ್ಲಿ ಅಕ್ರಮ ಮಧ್ಯ ಮಾರಾಟ ವಿರೋಧಿಸಿ KRS ಪಕ್ಷದಿಂದ ಪ್ರತಿಭಟನೆ.

## (ಗ್ರಾಮದಲ್ಲಿ ಬೀರು ಬೇಡ-ಶಿಕ್ಷಣ ಬೇಕು ಅಧಿಕಾರಿಗಳಿಗೆ ಮಹಿಳೆಯರ ದೂರು)

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಗೋಮರ್ಸಿ ಗ್ರಾಮದಲ್ಲಿ ಅಕ್ರಮವಾಗಿ ಮಧ್ಯ ಮಾರಾಟವನ್ನು ತಡೆಯುವಂತೆ ಒತ್ತಾಯಿಸಿ ಕೆ ಆರ್ ಎಸ್ ಪಕ್ಷದ ನೇತೃತ್ವದಲ್ಲಿ ಶುಕ್ರವಾರ ತಾಲೂಕಿನ ಪ್ರವಾಸಿ ಮಂದಿರದಿಂದ ತಹಶೀಲ್ದಾರ್ ಕಚೇರಿಯವರಿಗೆ ಪ್ರತಿಭಟನಾ ಪಾದಯಾತ್ರೆ ಮೂಲಕ ಗ್ರಾಮದ ನೂರಾರು ಮಹಿಳೆಯರು,ಪಕ್ಷದ ಮುಖಂಡರು ತೆರಳಿ ಮಾನ್ಯ ತಹಶೀಲ್ದಾರರು,ಅಬಕಾರಿ ನಿರೀಕ್ಷಕರು,ತಾಲೂಕು ಪಂಚಾಯಿತಿ ಹಾಗೂ,ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳಿಗೆ ಗೋಮರ್ಸಿ ಗ್ರಾಮದಲ್ಲಿ ಅಕ್ರಮ ಮಧ್ಯ ಮಾರಾಟ ನಿಷೇಧಿಸುವಂತೆ ಆಗ್ರಹ ಮಾಡಿದರು.**

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕೆ ಆರ್ ಎಸ್ ಪಕ್ಷದ ಮುಖಂಡ ನಿರುಪಾದಿ ಕೆ ಗೋಮರ್ಸಿ ಗ್ರಾಮದಲ್ಲಿ ಕೆಲವು ವ್ಯಕ್ತಿಗಳು ಯಾವುದೇ ಪರವಾನಿಗೆ



ಇಲ್ಲದೆ ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ವಸತಿ ಪ್ರದೇಶಗಳ ಸಮೀಪ ಅಕ್ರಮವಾಗಿ ಮಧ್ಯವನ್ನು ಮಾರಾಟ ಮಾಡುತ್ತಿದ್ದಾರೆ.ಇದರ ಪರಿಣಾಮವಾಗಿ ಊರಿನ ಯುವಕರು,ಕಾರ್ಮಿಕ ವರ್ಗದವರು, ರೈತಪಿ ಕೂಲಿಕಾರರು ದಿನ ನಿತ್ಯ ಮಧ್ಯ ಸೇವಿಸುವಂತಾಗುತ್ತಿದ್ದು ಇದರಿಂದ ಕುಟುಂಬದಲ್ಲಿ ಕಲಹ, ಸಾರ್ವಜನಿಕ ಅಶಾಂತಿ ಹಾಗೂ ಕಾನೂನು ವ್ಯವಸ್ಥೆಗೆ ಗ್ರಾಮದಲ್ಲಿ ಬಂಗ ಉಂಟಾಗುತ್ತಿದೆ. ವಿಶೇಷವಾಗಿ ಮಹಿಳೆಯರು,ಮಕ್ಕಳು ಮತ್ತು ವೃದ್ಧ-ರಿಗೆ ತೊಂದರೆಯಾಗುತ್ತಿದ್ದು ಇದರಿಂದ ಗ್ರಾಮದ



ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ.

ಗ್ರಾಮದಲ್ಲಿನ ಈ ಅಕ್ರಮ ಮಧ್ಯ ಮಾರಾಟವು ಸರ್ಕಾರದ ನಿಯಮಗಳಿಗೆ ವಿರುದ್ಧವಾಗಿದ್ದು ಸಮಾಜಕ್ಕೆ ಗಂಭೀರ ಹಾನಿ ಉಂಟು ಮಾಡುತ್ತಿದೆ ಗ್ರಾಮದ ಹಲವು ಅಂಗಡಿ ಮುಂಗಟಗಳಲ್ಲಿ,ಕಿರಾಣಿ ಅಂಗಡಿಯಗಳಲ್ಲಿ,ಮನೆಗಳಲ್ಲಿ ಅಕ್ರಮವಾಗಿ ಮಧ್ಯ ಮಾರಾಟ ಮಾಡಲಾಗುತ್ತಿದ್ದು ಇದರ ಪರಿಣಾಮ ಮಧ್ಯವು ಗ್ರಾಮಸ್ಥರಿಗೆ ಸುಲಭವಾಗಿ ದೊರೆಯುವಂತಾಗುತ್ತಿದೆ,ಆದ್ದರಿಂದ ದಯವಿಟ್ಟು ಸಂಬಂಧಿಸಿದ ಸ್ಥಳಗಳಲ್ಲಿ ತಕ್ಷಣ ದಾಳಿ ನಡೆಸಿ ಅಕ್ರಮ ಮಧ್ಯ ಮಾರಾಟ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಅವರನ್ನ ಶಿಕ್ಷೆಗೆ ಒಳಪಡಿಸಿ ಸಾರಾಯಿ ಮುಕ್ತ ಗೋಮರ್ಸಿ ಯನ್ನಾಗಿ ನಿರ್ಮಾಣ ಮಾಡಬೇಕೆಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಸಮಾಜಿ-ಕ ಹೋರಾಟಗಾರರಾದ ವಿರುಪಮ್ಮ,ಲಕ್ಷ್ಮೀ ಪತ್ತಾರ,ಬಸವರಾಜ ಗೋಡಿಹಾಳ, ದಾವಲ್ ಸಾಬ್ ದೊಡ್ಮನಿ, ಕೆ ಆರ್ ಎಸ್ ಪಕ್ಷದ ಮುಖಂಡರಾದ ಶಿವರಾಜ್ ಕಪಗಲ್, ವಿಜಯ್ ಕುಮಾರ್, ವಿಶ್ವನಾಥ್ ನಾಯ್ಡು, ಕನಕಪ್ಪ ಉಡೆಜಾಲಿ, ಗಣೇಶ್ ಅಮೃತ್, ಬಸವರಾಜ ಅಮೀನಗಡ, ಮೌನೇಶ್, ಗಣೇಶ್ ಸಾರಂಗಿ, ಮೊಹಮದ್ ಗೌಸ್, ಅಯ್ಯಪ್ಪ ಮೇಟಿ, ವೀರೇಶ್ ಉಡಮಕಲ್, ಅಪ್ಪಯ್ಯ ಗೊಮರ್ಸಿ, ಹನುಮಂತ, ಮೆಹಬೂಬ್ ಸಾಬ್, ಶಾಮಿಧ್ ಅಲಿ, ನಾಗಪ್ಪ, ಮುದಿಯಪ್ಪ, ಶ್ರೀನಿವಾಸ, ಪ್ರಶಾಂತ್, ಮೂರ್ತುಜಾ ಸೇರಿದಂತೆ ಗ್ರಾಮದ ನೂರಾರು ಜನ ಮಹಿಳೆಯರು ಸೇರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### B.V.Sc & AH

B.V.Sc & AH (Bachelor of Veterinary Sciences & Animal Husbandry) ಎಂಬುದು 5.5 ವರ್ಷಗಳ (5 ವರ್ಷಗಳ ಅಧ್ಯಯನ + 6 ತಿಂಗಳ ಇಂಟರ್ನ್‌ಶಿಪ್) ಅವಧಿಯ ಪದವಿ ಕೋರ್ಸ್ ಆಗಿದೆ. ಇದು ಪ್ರಾಣಿಗಳ ಆರೋಗ್ಯ, ಚಿಕಿತ್ಸೆ ಮತ್ತು ಪೋಷಣೆಯ ಬಗ್ಗೆ ಕಲಿಸುತ್ತದೆ. 12ನೇ ತರಗತಿಯಲ್ಲಿ (ಕಅಃ) ಉತ್ತೀರ್ಣರಾದ ವಿದ್ಯಾರ್ಥಿಗಳು ಓಇಇಖಿ ಗಉ ಪರೀಕ್ಷೆಯ ಮೂಲಕ ಪ್ರವೇಶ ಪಡೆಯಬಹುದು. ಇದು ಉತ್ತಮ ವೃತ್ತಿಜೀವನದ ಅವಕಾಶಗಳನ್ನು ಹೊಂದಿದೆ. ಕೋರ್ಸ್ ವಿವರಗಳು (Course Details): ಕೋರ್ಸ್ ಹೆಸರು: B.V.Sc & AH (Bachelor of Veterinary Sciences & Animal Husbandry). ಅವಧಿ: 5.5 ವರ್ಷಗಳು (4.5 ವರ್ಷಗಳ ಶೈಕ್ಷಣಿಕ ಅಧ್ಯಯನ + 1 ವರ್ಷದ ಕಡ್ಡಾಯ ಇಂಟರ್ನ್‌ಶಿಪ್). ಅರ್ಹತೆ: 12ನೇ ತರಗತಿಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಮತ್ತು ಜೀವಶಾಸ್ತ್ರ (PCB) ವಿಷಯಗಳಲ್ಲಿ ಕನಿಷ್ಠ 50% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ್ರವೇಶ ಪರೀಕ್ಷೆ: ಓಇಇಖಿ-ಗಉ ಪರೀಕ್ಷೆ ಕಡ್ಡಾಯ. ಅಧ್ಯಯನದ ವಿಷಯಗಳು: ಪ್ರಾಣಿಗಳ ಅಂಗರಚನಾಶಾಸ್ತ್ರ (Anatomy), ರೋಗಶಾಸ್ತ್ರ (Pathology), ಪೋಷಣೆ (Nutrition), ಶಸ್ತ್ರಚಿಕಿತ್ಸೆ (Surgery), ಮತ್ತು ಹೈನುಗಾರಿಕೆ. ವೃತ್ತಿ ಅವಕಾಶಗಳು (Career Opportunities): ವೆಟರ್ನರಿ ಡಾಕ್ಟರ್ (Veterinary Doctor): ಸಾಕುಪ್ರಾಣಿಗಳು ಮತ್ತು ವನ್ಯಜೀವಿಗಳ ಚಿಕಿತ್ಸೆ. ವೆಟರ್ನರಿ ಆಫೀಸರ್: ಸರ್ಕಾರಿ ಪಶುಸಂಗೋಪನಾ ಇಲಾಖೆಗಳಲ್ಲಿ. ರಿಸರ್ಚ್ ಸೈಂಟಿಸ್ಟ್: ಪ್ರಾಣಿಗಳ ರೋಗಗಳ ಬಗ್ಗೆ ಸಂಶೋಧನೆ. ಹೈನುಗಾರಿಕೆ ಮತ್ತು ಸಾಕಾಣಿಕೆ: ಸ್ವಂತ ಉದ್ಯಮ.

## ರಾಜ್ಯ ಸಿವಿಲ್ ಸೇವಾ ನೇರ ನೇಮಕಾತಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷ ಸಡಿಲಿಕೆ: ಸರ್ಕಾರದ ಹೊಸ ಆದೇಶ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ 5 ವರ್ಷಗಳಷ್ಟು ಸಡಿಲಿಕೆ ನೀಡಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಈ ಮೂಲಕ ಅನೇಕ ಉದ್ಯೋಗಾಕಾಂಕ್ಷಿಗಳಿಗೆ ಮತ್ತೊಂದು ಅವಕಾಶ ದೊರೆತಿದೆ.**

ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು1) ವತಿಯಿಂದ ದಿನಾಂಕ 29.01.2026ರಂದು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ಪ್ರಕಟಿಸಲಾಗಿದೆ. ಹಿಂದಿನ ದಿನಾಂಕ 29.09.2025ರ ಆದೇಶದಲ್ಲಿ ನೀಡಿದ್ದ 3 ವರ್ಷಗಳ ವಯೋಮಿತಿ ಸಡಿಲಿಕೆಯನ್ನು ಸರ್ಕಾರ ಹಿಂಪಡೆದು, ಅದರ ಬದಲಿಗೆ 5 ವರ್ಷಗಳ ಸಡಿಲಿಕೆಯನ್ನು ಘೋಷಿಸಿದೆ. ಉದ್ಯೋಗಾಕಾಂಕ್ಷಿಗಳು, ಜನಪ್ರತಿನಿಧಿಗಳು ಹಾಗೂ ವಿವಿಧ ಸಂಘಟನೆಗಳಿಂದ ಬಂದ ಮನವಿಗಳ ಹಿನ್ನೆಲೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧರಾಗುತ್ತಿರುವ ಅಭ್ಯರ್ಥಿಗಳಿಗೆ ಕೋವಿಡ್ ನಂತರದ ಅವಧಿಯಲ್ಲಿ ಉಂಟಾದ ವ್ಯತ್ಯಯ ಹಾಗೂ ನೇಮಕಾತಿ ವಿಳಂಬವನ್ನು ಗಮನದಲ್ಲಿಟ್ಟುಕೊಂಡು ಈ ಸಡಿಲಿಕೆ ನೀಡಲಾಗಿದೆ ಎನ್ನಲಾಗಿದೆ. ಈ ಆದೇಶವು ಈ ದಿನಾಂಕದಿಂದ 31.12.2027ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡುವ ಎಲ್ಲಾ ಅಧಿಸೂಚನೆಗಳಿಗೆ ಅನ್ವಯವಾಗಲಿದೆ. ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಗೆ ಮಾತ್ರ ಈ 5 ವರ್ಷಗಳ ಸಡಿಲಿಕೆ ದೊರೆಯಲಿದೆ. ರಾಜ್ಯಪಾಲರ ಆಜ್ಞಾನುಸಾರ ಈ ಆದೇಶವನ್ನು ಸರ್ಕಾರದ ಅಧೀನ ಕಾರ್ಯದರ್ಶಿ ಆಶಾಕುಮಾರಿ ಎ.ಜಿ ಹೊರಡಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಮಾಹಿತಿ ಕೊಡದ ಅಧಿಕಾರಿಗಳಿಗೆ ದಂಡವಿಧಿಸಿ ಬಿಸಿ ಮುಟ್ಟಿಸಿದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್

ನೈಜ್ಯ ದೆಸೆ ನ್ಯೂಸ್



**ರಾಯಚೂರು: ಮಾಹಿತಿ ನೀಡಲು ನಿರ್ಲಕ್ಷ್ಯ ಮಾಡಿದ್ದಕ್ಕೆ ಮೂರು ಜನ ಸಾರ್ವಜನಿಕ ಮಾಹಿತಿ ಅಧಿಕಾರಿಗಳಾದ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದಿಂದ ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಹೇಳಿದರು.**

ಕಲಬುರಗಿಯ ತಮ್ಮ ಪೀಠದ ಕಚೇರಿಯಲ್ಲಿ ಜನವರಿ 31ರಂದು ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಗುರುಮೂರ್ತಿ ಎನ್ನುವರು 17.11.2022 ರಂದು ಮಾಹಿತಿ ಕೋರಿ ಸಲ್ಲಿಸಿದ 6(1) ಅರ್ಜಿಗೆ ಮಾಹಿತಿ ನೀಡದ ಕಾರಣ ಮಾನ್ವಿ ತಾಲೂಕಿನ ಸುಂಕೇಶ್ವರ ಗ್ರಾಮ ಪಂಚಾಯತ ಅಧಿಕಾರಿ ನಾಗಭೂಷಣ ಅವರಿಗೆ 25,000 ರೂ. ದಂಡ ವಿಧಿಸಿ 23.01.2026 ರಂದು ಆದೇಶ ಮಾಡಲಾಗಿದೆ ಎಂದು ತಿಳಿಸಿದರು. ಈ ಪ್ರಕರಣದ ವಿಚಾರಣೆ ನಡೆಸಿದ ಆಯೋಗವು, 15ನೇ ಹಣಕಾಸು ಆಯೋಗದ ಕುರಿತು ಕೋರಿದ ಮಾಹಿತಿ ನೀಡಬೇಕು ಎಂದು 06.10.2025 ರಂದು ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಎಚ್ಚರಿಕೆ ಆದೇಶ ನೀಡಲಾಗಿತ್ತು. ಆದರೂ ಅವರು ಮಾಹಿತಿ ನೀಡಲು ನಿರ್ಲಕ್ಷ ತೋರಿದ್ದರಿಂದಾಗಿ 25,000 ರೂ. ಸಾವಿರ ದಂದ ವಿಧಿಸಲಾಗಿದೆ ಎಂದರು.

ಜಲಾಲ ಎನ್ನುವರು ಸಹ 15ನೇ ಹಣಕಾಸು ಆಯೋಗದ ಅನುದಾನ ಕುರಿತು ಸುಂಕೇಶ್ವರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ನಾಗಭೂಷಣ ಅವರಿಗೆ 25.10.2023 ರಂದು 6(1) ರಡಿ ಅರ್ಜಿ ಸಲ್ಲಿಸಿದ್ದರು. ಈ ಪ್ರಕರಣದಲ್ಲಿ ಮಾಹಿತಿ ಸಿಗದ ಅರ್ಜಿದಾರರು 19(3) ಆಯೋಗಕ್ಕೆ ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ದಿನಾಂಕ 25.10.2023 ರಂದು ನಡೆಸಿ, ಅರ್ಜಿದಾರರಿಗೆ ಮಾಹಿತಿ ನೀಡಬೇಕು ಎಂದು ಕರ್ನಾಟಕ ಮಾಹಿತಿ ಕಾಯ್ದೆ 2005ರ 20(1) ರನ್ವಯ ಎಚ್ಚರಿಕೆ ನೋಟಿಸ್ ನೀಡಲಾಗಿತ್ತು. ಆದಾಗ್ಯೂ ಪಿ.ಡಿ.ಓ. ನಾಗಭೂಷಣ ಅವರು ಮಾಹಿತಿ ನೀಡದ ಕಾರಣ ಈ ಪ್ರಕರಣದ ಬಗ್ಗೆ ದಿನಾಂಕ: 23.01.2026 ರಂದು ವಿಚಾರಣೆ ನಡೆಸಿದಾಗ ಅವರು ವಿಚಾರಣೆ ಗೈರು ಆಗಿ ಮಾಹಿತಿ ನೀಡದ ಕಾರಣ ಅವರಿಗೆ ರೂ.25.000 ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ಹೇಳಿದರು.

ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಅಡಕಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಭಗವಂತರಾಯ ಮರಡಿ ಅವರಿಗೆ ಸಹ ರೂ.15,000 ರೂ. ದಂಢ ವಿಧಿಸಲಾಗಿದೆ. ರವಿ ಮದನಕರ್ ಎನ್ನುವರು 15ನೇ ಹಣಕಾಸು ಆಯೋಗದ ಅನುದಾನಕ್ಕೆ ಸಂಬಂಧಿಸಿದಂತೆ ಮಾಹಿತಿ ಕೋರಿ ದಿನಾಂಕ:07.08.2023 ರಂದು ಅರ್ಜಿ ಸಲ್ಲಿಸಿದ್ದರು. ಈ ಮಾಹಿತಿ ನೀಡದ ಕಾರಣ ಈ ಪ್ರಕರಣದಲ್ಲಿ ಸಲ್ಲಿಕೆಯದ ಮೇಲ್ಮನವಿ ಆಧಾರದ ಮೇಲೆ ದಿನಾಂಕ:15.09.2025ರಂದು ವಿಚಾರಣೆ ನಡೆಸಿ ದಂಡ ವಿಧಿಸುವ ಕುರಿತು ಭಗವಂತರಾಯ ಮರಡಿ ಅವರಿಗೆ ಎಚ್ಚರಿಕೆ ನೀಡಲಾಗಿತ್ತು. ಆದರೂ ಅವರು ಅರ್ಜಿದಾರರಿಗೆ ಮಾಹಿತಿ ನೀಡಿದ ಕಾರಣ ದಿನಾಂಕ:23.01.2026 ರಂದು ವಿಚಾರಣೆ ವೇಳ ಪಿ.ಡಿ.ಓ ಭಗವಂತರಾಯ ಮರಡಿ ಗೈರು ಹಾಜರಾಗಿ ಮಾಹಿತಿ ನೀಡದ ಕಾರಣ ರೂ. 15,000 ದಂಡ ವಿಧಿಸಲಾಗಿದೆ ಎಂದು ತಿಳಿಸಿದರು. ನವೆಂಬರ್ 2025ರಿಂದ ವಿಚಾರಣೆ ಆರಂಭಿಸಿ 2010 ರಿಂದ 2022ರವರೆಗಿನ 357 ಪ್ರಕರಣಗಳನ್ನು ವಿಚಾರಣೆ ನಡೆಸಿ ಈ ಪೈಕಿ 282 ವಿಲೇವಾರಿ ಮಾಡಲಾಗಿದೆ.

2023ರಿಂದ ದಾಖಲಾದ ಪ್ರಕರಣಗಳನ್ನು 2026ರ ಜನವರಿಯಿಂದ ವಿಚಾರಣೆ ನಡೆಸಲಾಗುತ್ತಿದೆ ಎಂದು ಹೇಳಿದರು. 2025ರ ನವೆಂಬರ್ 24 ರಿಂದ 2026ರ ಜನವರಿ 30ರವರೆಗೆ 992 ಪ್ರಕರಣಗಳ ವಿಚಾರಣೆ ನಡೆಸಿ ಈ ಪೈಕಿ 400 ಪ್ರಕರಗಳನ್ನು ವಿಲೇವಾರಿ ಮಾಡಲಾಗಿದೆ. ಈಗಾಗಲೇ ಮುಂಚಿನ ಆಯುಕ್ತರು ವಿಚಾರಣೆ ನಡೆಸಿದ ಬಾಕಿ ಹಳೆಯ ಪ್ರಕರಣಗಳು 882 ಇದ್ದು ಬರುವ ಮಾರ್ಚ ತಿಂಗಳಲ್ಲಿ ಈ ಪ್ರಕರಣಗಳನ್ನು ವಿಚಾರಣೆಗೆ ತೆಗೆದುಕೊಳ್ಳಲಾಗುವುದು ಎಂದು ವಿವರಿಸಿದರು. ಕಲಬುರಗಿ ಪೀಠದಲ್ಲಿ 19(3) ಅರ್ಜಿ ಸ್ವೀಕಾರ: ಈ ಮೊದಲು ಬೆಂಗಳೂರಿನಲ್ಲಿ ಮಾಹಿತಿ ಹಕ್ಕು ಕಾಯಿದೆಯಡಿ 19(3)ರಡಿ ಮೇಲ್ಮನವಿ ಅರ್ಜಿಗಳನ್ನು ಪಡೆಯಲಾಗುತ್ತಿತ್ತು.

ಆದರೆ, ಈಗ ಮಾಹಿತಿ ಹಕ್ಕು 19(3) ರಡಿ ಮೇಲ್ಮನವಿ ಅರ್ಜಿಗಳನ್ನು ಕಲಬುರಗಿ ಪೀಠದಲ್ಲಿ ಪಡೆದು ಪರಿಶೀಲನೆ ಮಾಡಿ 2026ರ ಫೆಬ್ರವರಿಯಿಂದ ವಿಚಾರಣೆ ಕೈಗೊಳ್ಳಲಾಗುತ್ತದೆ ಎಂದರು. ಕೊಪ್ಪಳ ಜಿಲ್ಲೆಯಲ್ಲಿ ಕಾರ್ಯಗಾರ: ಮಾಹಿತಿ ಹಕ್ಕು ಕಾಯಿದೆ ಕಾರ್ಯಾಗಾರವು ಈಗಾಗಲೇ ಬೀದರ ಮತ್ತು ಬಳ್ಳಾರಿಯಲ್ಲಿ ಮುಗಿದಿದ್ದು, ಫೆಬ್ರವರಿ ಮಾಹೆಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ನಿಗದಿಮಾಡಿದೆ. ಪ್ರಸ್ತುತ ಕಲಬುರಗಿ ಪೀಠದಲ್ಲಿ 6691 ಪ್ರಕರಣಗಳು ಬಾಕಿ ಇದ್ದು, ತ್ವರಿತ ವಿಲೇವಾರಿಗೆ ಕ್ರಮ ವಹಿಸಲಾಗುವುದು ಎಂದು ಅವರು ತಿಳಿಸಿದರು.

ದಂಡ ವಸೂಲಿ: ಸದ್ಯ ಬಾಗಲಕೋಟೆಯಲ್ಲಿರುವ ಈ ಹಿಂದೆ ಕೊಪ್ಪಳ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ರಾಜಕುಮಾರ ಯರಗಲ್ ಅವರಿಂದ 10 ಸಾವಿರ ರೂ. ದಂಡ, ಅದೇ ರೀತಿ ರಾಯಚೂರಿನ ಯರಮರಸ್ ಡಯಟರ್‌ನ ಹಿರಿಯ ಉಪನ್ಯಾಸಕರಾದ ಮಲ್ಲಿಕಾರ್ಜುನ ಅವರಿಂದ 15,000 ರೂ. ದಂಡ ವಸೂಲಿ ಮಾಡಲಾಗಿದೆ ಎಂದು ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಮಾಹಿತಿ ನೀಡಿದರು.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ 2025-26ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.**

Department of Health & Family Welfare

ಹುದ್ದೆಗಳ ವಿವರ: ಸ್ತ್ರೀ ರೋಗ ತಜ್ಞರು-02 ಹುದ್ದೆ ತಾಯಿ ಆರೋಗ್ಯ ಕಾರ್ಯಕ್ರಮ, ಮಕ್ಕಳ ತಜ್ಞರು-02 ಹುದ್ದೆಗಳು ಮಕ್ಕಳ ಆರೋಗ್ಯ ಕಾರ್ಯಕ್ರಮ, ನೇತ್ರ ತಜ್ಞರು-01 ಅಂಧತ್ವ ಕಾರ್ಯಕ್ರಮ, ಕಿವಿ ಹಾಗೂ ಮೂಗು ಗಂಟಲು ತಜ್ಞರು-02 ಎನ್.ಪಿ.ಪಿ.ಸಿ.ಡಿ ಮಾನ್ವಿ ಹಾಗೂ ಲಿಂಗಸೂಗೂರು, ಸೈಕ್ಯಾಟ್ರಿಷ್ಟ್ ತಜ್ಞರು?01 ಹುದ್ದೆ ಎನ್.ಎಂ.ಹೆಚ್.ಪಿ. ಕಾರ್ಯಕ್ರಮ ಟಿ.ಎಂ.ಹೆಚ್.ಪಿ. ಲಿಂಗಸೂಗೂರು, ಆಯುಷ್ ಪಂಚಕರ್ಮ ತಜ್ಞರು-01 ಹುದ್ದೆ ಆಯುಷ್ ಕಾರ್ಯಕ್ರಮ, ಎಂ.ಬಿ.ಬಿ.ಎಸ್. ವೈದ್ಯರು-02 ಹುದ್ದೆಗಳು ಎಸ್.ಎನ್.ಸಿ.ಯು. ವಿಭಾಗ ರಿಮ್ಸ್ ಬೋಧಕ ಆಸ್ಪತ್ರೆ, ಎಂ.ಬಿ.ಬಿ.ಎಸ್. ವೈದ್ಯರು-03 ಹುದ್ದೆಗಳು ಹೆಚ್.ಡಿ.ಯು. ವಿಭಾಗ ರಿಮ್ಸ್ ಬೋಧಕ ಆಸ್ಪತ್ರೆ, ಎಂ.ಬಿ.ಬಿ.ಎಸ್. ವೈದ್ಯರು-01 ಹುದ್ದೆ ಎನ್.ಆರ್.ಸಿ. ವಿಭಾಗ ರಿಮ್ಸ್ ಬೋಧಕ ಆಸ್ಪತ್ರೆ, ಎಂ.ಬಿ.ಬಿ.ಎಸ್. ವೈದ್ಯರು-02 ಹುದ್ದೆಗಳು ಐ.ಸಿ.ಯು. ತಾಲೂಕು ಸಾರ್ವಜನಿಕ ಆಸ್ಪತ್ರೆ ದೇವದುರ್ಗ ಹಾಗೂ ಸಿಂಧನೂರು, ಎಂ.ಬಿ.ಬಿ.ಎಸ್. ವೈದ್ಯರು-06 ಹುದ್ದೆಗಳು ಎನ್.ಸಿ.ಡಿ. ವಿಭಾಗ ಸಾರ್ವಜನಿಕ ಆಸ್ಪತ್ರೆ ಲಿಂಗಸೂಗೂರು, ಮಾನ್ವಿ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಜಾಲಹಳ್ಳಿ, ಅರಕೇರಾ, ಮುದುಗಲ್ ಹಾಗೂ ಅನೆಹೋಸೂರು, ಎಂ.ಬಿ.ಬಿ.ಎಸ್, ವೈದ್ಯರು-04 ಹುದ್ದೆಗಳು ಪಿ.ಎಂ. ಅಭೀಮ್ ನಮ್ಮ ಕ್ಲಿನಿಕ್ ಕರಡಕಲ್, ಕವಿತಾಳ್, ತುರ್ವಿಹಾಳ್ ಹಾಗೂ ಮಸ್ಕಿ, ಒಟ್ಟು-27 ಹುದ್ದೆಗಳಿಗೆ ಫ್ರೆಬವರಿ 4ರ ಬೆಳಿಗ್ಗೆ 11.30ಕ್ಕೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನೇರ ಸಂದರ್ಶನದಲ್ಲಿ ಭಾಗಿಯಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ಅಭಿವೃದ್ಧಿ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯ ರಾಯಚೂರು ಕಚೇರಿ ಅವಧಿಯಲ್ಲಿ ಮಾಹಿತಿಯನ್ನು ಪಡೆಯಬಹುದು. ಅಥವಾ ದೂರವಾಣಿ ಸಂಖ್ಯೆ : 9449843121ಗೆ ಅಥವಾ ಕಚೇರಿಯ ಸೂಚನಾ ಫಲಕ ನೋಡಬಹುದಾಗಿದೆ ಎಂದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳು ಭವಿಷ್ಯ ರೂಪಿಸಿಕೊಳ್ಳುವತ್ತ ಗಮನ ಹರಿಸಲಿ: ನ್ಯಾ.ಹೆಚ್.ಎ.ಸಾತ್ವಿಕ್ ಸಲಹೆ

ನೈಜ್ಯ ದೆಸೆ ನ್ಯೂಸ್



**ರಾಯಚೂರು: ಬಾಲ್ಯ ವಿವಾಹ ನಿಷೇಧ ಜಾಗೃತಿ ಸಂಚಾರಿ ರಥ ವಾಹನಕ್ಕೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ. ಸಾತ್ವಿಕ್ ಅವರು ಜನವರಿ 31ರಂದು ನಗರದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಆವರಣದಲ್ಲಿ ಹಸಿರು ನಿಶಾನೆ ತೋರಿದರು.**

ಈ ವೇಳೆ ಅವರು ಮಾತನಾಡಿ, ಬಾಲ್ಯ ವಿವಾಹವು ಅತ್ಯಂತ ಕೆಟ್ಟ ಪಿಡುಗಾಗಿದ್ದು, ಇದು ಮಕ್ಕಳ ಭವಿಷ್ಯವನ್ನು ಹಾಳು ಮಾಡುತ್ತದೆ. ಹಾಗೂ ಹಲವಾರು ಸಾಮಾಜಿಕ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಅಪ್ರಾಪ್ತ ವಯಸ್ಸಿನ ಮಕ್ಕಳನ್ನು ಮದುವೆ ಮಾಡಿಕೊಳ್ಳುವವರಿಗೆ, ಮಾಡುವವರಿಗೆ, ಬೆಂಬಲ ನೀಡುವವರಿಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ರಂತೆ ಎರಡು ವರ್ಷಗಳ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಲಾಗುತ್ತದೆ. ಹುಡುಗಿಗೆ ಹದಿನೆಂಟು ವರ್ಷ ಹಾಗೂ ಹುಡುಗನಿಗೆ ಇಪ್ಪತ್ತೊಂದು ವರ್ಷ ತುಂಬುವವರೆಗೆ ಯಾವುದೇ ಕಾರಣಕ್ಕೂ ವಿವಾಹ ಮಾಡಿಕೊಳ್ಳಬಾರದು. ಮತ್ತು ಉತ್ತಮವಾಗಿ ವಿದ್ಯಾಭ್ಯಾಸ ಮಾಡುವ ಮೂಲಕ ನಿಮ್ಮ ಭವಿಷ್ಯ ರೂಪಿಸಿಕೊಳ್ಳುವ ಕಡೆಗೆ ಗಮನ ಹರಿಸಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ವೇಳೆ ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ ಅವರು ಮಾತನಾಡಿ, ಮಕ್ಕಳು ವಿದ್ಯಾರ್ಥಿ ದಿಸೆಯಲ್ಲಿ ಶಿಕ್ಷಣದ ಕಡೆಗೆ ಒತ್ತು ನೀಡಿ ಚೆನ್ನಾಗಿ ಅಭ್ಯಾಸ ಮಾಡಿ ತಂದೆ ತಾಯಿಯ ಗೌರವ ಮತ್ತು ಕೀರ್ತಿಯನ್ನು ಹೆಚ್ಚಿಸಬೇಕು ಎಂದರು.

ಸಂಚಾರಿ ರಥ ವಾಹನದ ಮೂಲಕ ಜಾಗೃತಿ: ನಂತರ, ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಆವರಣದಿಂದ ನಗರದ ಸ್ಟೇಷನ್ ವೃತ್ತದವರೆಗೆ ಬಾಲ್ಯ ವಿವಾಹ ಜಾಗೃತಿ ಕುರಿತು ಸಂಚಾರಿ ರಥ ವಾಹನದ ಮೂಲಕ ಮಕ್ಕಳೊಂದಿಗೆ ಜಾಥಾ ನಡೆಯಿತು. ಇದಕ್ಕೂ ಮುಂಚೆ ಮಕ್ಕಳಿಗೆ ಬಾಲ್ಯ ವಿವಾಹ ನಿಷೇಧ ಕುರಿತು ಪ್ರತಿಜ್ಞೆ ವಿಧಿ ಬೋಧಿಸಲಾಯಿತು. ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನವೀನ್ ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ಕ್ಷೇತ್ರ ಶಿಕ್ಷಣ ಅಧಿಕಾರಿ ಈರಣ್ಣ ಕೋಸಗಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ್ ಹಾಗೂ ಕಾಲೇಜಿನ ಪ್ರಾಚಾರ್ಯ ಕುಂಟೆಪ್ಪ, ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಶ್ರೀನಿವಾಸ್ ಹಾಗೂ ಮಾರ್ಗದರ್ಶಿ ಸಂಸ್ಥೆಯ ಅನಂದರಾಜ್ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿ ಇದ್ದರು.

# ಡ್ಯಾಪ್ಫೊಡಿಲ್ಸ್ ಕಾನ್ಸೆಪ್ಟ್ ಶಾಲೆ ಐಸಿಎಸ್‌ಇ ಶಾಲೆಯಲ್ಲಿ ಯುರೇಕಾ 2026 ವಿಜ್ಞಾನ ಪ್ರದರ್ಶನ (The Science Expo) ಅತ್ಯಂತ ಯಶಸ್ವಿಯಾಗಿ ನಡೆಯಿತು

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಡ್ಯಾಪ್ಫೊಡಿಲ್ಸ್ ಕಾನ್ಸೆಪ್ಟ್ ಶಾಲೆ ಐಸಿಎಸ್‌ಇ ಶಾಲೆಯಲ್ಲಿ ಯುರೇಕಾ 2ಐ26 ವಿಜ್ಞಾನ ಪ್ರದರ್ಶನ (The Science Expo) ಅತ್ಯಂತ ಯಶಸ್ವಿಯಾಗಿ ನಡೆಯಿತು ವಿದ್ಯಾರ್ಥಿಗಳಲ್ಲಿ ವಿಜ್ಞಾನ ಕುರಿತ ಆಸಕ್ತಿ, ವೈಜ್ಞಾನಿಕ ಚಿಂತನೆ, ಸೃಜನಶೀಲತೆ, ಸಂಶೋಧನಾ ಮನೋಭಾವ ಹಾಗೂ ನವೀನ ಆಲೋಚನೆಗಳನ್ನು ಉತ್ತೇಜಿಸುವ ಉದ್ದೇಶದಿಂದ ಡ್ಯಾಪ್ಫೊಡಿಲ್ಸ್ ಕಾನ್ಸೆಪ್ಟ್ ಶಾಲೆ ? ಐಸಿಎಸ್‌ಇ ವತಿಯಿಂದ "ಯುರೇಕಾ! 2ಐ26" ವಿಜ್ಞಾನ ಪ್ರದರ್ಶನವನ್ನು ಎರಡು ದಿನಗಳ ಕಾಲ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗಿತ್ತು. ಈ ಮೊದಲ ದಿನದ ಪ್ರದರ್ಶನದಲ್ಲಿ ಶಾಲೆಯ ಪ್ರಾಥಮಿಕ,**

ಪ್ರೌಢ ಹಾಗೂ ಹಿರಿಯ ತರಗತಿಗಳ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಸ್ವಂತ ಕಲ್ಪನೆಗಳಿಂದ ರೂಪಿಸಿದ ವಿಜ್ಞಾನ ಮಾದರಿಗಳು, ಕಾರ್ಯನಿರ್ವಹಿಸುವ ಪ್ರಯೋಗಗಳು ಹಾಗೂ ತಂತ್ರಜ್ಞಾನ ಆಧಾರಿತ ನವೀನ ಯೋಜನೆಗಳನ್ನು ಪ್ರದರ್ಶಿಸಿದರು. ಪ್ರದರ್ಶನದಲ್ಲಿ ನವೀಕರಿಸಬಹುದಾದ ಶಕ್ತಿ ಸಂಪನ್ಮೂಲಗಳು, ಸೌರ ಮತ್ತು ಪವನ ಶಕ್ತಿ,






ಜಲ ಸಂರಕ್ಷಣೆ, ಪರಿಸರ ಸಂರಕ್ಷಣೆ, ಹವಾಮಾನ ಬದಲಾವಣೆ, ಆರೋಗ್ಯ ಮತ್ತು ಪೌಷ್ಟಿಕತೆ, ಮಾನವ ದೇಹದ ರಚನೆ ಮತ್ತು ಕಾರ್ಯವಿಧಾನ, ಕೃತಕ ಬುದ್ಧಿಮತ್ತೆ, ರೋಬೋಟಿಕ್ಸ್, ಸ್ಮಾರ್ಟ್ ತಂತ್ರಜ್ಞಾನ, ಡಿಜಿಟಲ್ ಇಂಡಿಯಾ ಹಾಗೂ ದೈನಂದಿನ ಜೀವನದಲ್ಲಿ ವಿಜ್ಞಾನ ಉಪಯೋಗಕ್ಕೆ ಸಂಬಂಧಿಸಿದ ಅನೇಕ ಮಾದರಿಗಳು ಎಲ್ಲರ ಗಮನ ಸೆಳೆದವು. ವಿದ್ಯಾರ್ಥಿಗಳು ತಮ್ಮ ಮಾದರಿಗಳ ಹಿಂದೆ ಇರುವ ವೈಜ್ಞಾನಿಕ ತತ್ತ್ವಗಳನ್ನು ಸುಲಭವಾಗಿ ವಿವರಿಸಿ, ಅವುಗಳ ಸಾಮಾಜಿಕ ಮತ್ತು ಭವಿಷ್ಯದ ಮಹತ್ವವನ್ನು ತಿಳಿಸಿದರು. ಈ ವಿಜ್ಞಾನ ಪ್ರದರ್ಶನಕ್ಕೆ ಪಾಲಕರು, ಶಿಕ್ಷಕರು, ಶಿಕ್ಷಣ ತಜ್ಞರು, ಸ್ಥಳೀಯ ಗಣ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ವಿದ್ಯಾರ್ಥಿಗಳ ಪ್ರತಿಭೆ, ಆತ್ಮವಿಶ್ವಾಸ ಮತ್ತು ಪ್ರಸ್ತುತಪಡಿಸುವ ಕೌಶಲ್ಯವನ್ನು ಹೃತ್ಪೂರ್ವಕವಾಗಿ ಶ್ಲಾಘಿಸಿದರು.

ಮಕ್ಕಳಲ್ಲಿ ವಿಜ್ಞಾನ ಕಲಿಕೆಗೆ ಇರುವ ಉತ್ಸಾಹ, ತಂಡಕಾರ್ಯ, ಸಂವಹನ ಕೌಶಲ್ಯ ಮತ್ತು ಸಮಸ್ಯೆ ಪರಿಹಾರ ಸಾಮರ್ಥ್ಯ ಈ ಪ್ರದರ್ಶನದ ಮೂಲಕ ಸ್ಪಷ್ಟವಾಗಿ ವ್ಯಕ್ತವಾಯಿತು ಎಂದು ಅನೇಕರು ಅಭಿಪ್ರಾಯಪಟ್ಟರು. , ಜ 31 2026 ಬೆಳಿಗ್ಗೆ 9:00 ರಿಂದ ಸಂಜೆ 4:30 ರವರೆಗೆ ಕಾರ್ಯಕ್ರಮದ ಅಂಗವಾಗಿ ವಿಜ್ಞಾನ ಕ್ವಿಜ್, ನೇರ ಪ್ರಯೋಗ ಪ್ರದರ್ಶನ, ಸಂವಾದಾತ್ಮಕ ವಿವರಣೆ ಸೆಷನ್‌ಗಳು ಹಾಗೂ ವಿಜ್ಞಾನಾಧಾರಿತ ಚಟುವಟಿಕೆಗಳನ್ನು ಕೂಡ ಆಯೋಜಿಸಲಾಗಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ಕಲಿಕೆಯ ಹೊಸ ಅನುಭವ ಲಭಿಸಿತು. ಸಮಾರೋಪ ಸಮಾರಂಭದಲ್ಲಿ ಶಾಲಾ ಪ್ರಾಚಾರ್ಯರು ಮಾತನಾಡಿ, ಇಂತಹ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಪುಸ್ತಕಾಧಾರಿತ ಶಿಕ್ಷಣವನ್ನು ಮೀರಿಸಿ ಪ್ರಾಯೋಗಿಕ ಜ್ಞಾನ, ತಾರ್ಕಿಕ ಚಿಂತನೆ ಮತ್ತು ಭವಿಷ್ಯದ ವಿಜ್ಞಾನಿಣ ಅಭಿಯಂತರರ ರೂಪುಗೊಳ್ಳುವಿಕೆಗೆ ಬಲ ನೀಡುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಎಲ್ಲಾ ಶಿಕ್ಷಕರು, ವಿದ್ಯಾರ್ಥಿಗಳು, ಪಾಲಕರು ಹಾಗೂ ಸಿಬ್ಬಂದಿಗೆ ಶಾಲಾ ಆಡಳಿತ ಮಂಡಳಿ ಹೃತ್ಪೂರ್ವಕ ಅಭಿನಂದನೆ ಹಾಗೂ ಧನ್ಯವಾದಗಳನ್ನು ಅರ್ಪಿಸಿದೆ. ಈ ರೀತಿಯ ವಿಜ್ಞಾನ ಪ್ರದರ್ಶನಗಳು ಶಿಕ್ಷಣ ಕ್ಷೇತ್ರದಲ್ಲಿ ವಿದ್ಯಾರ್ಥಿಕೇಂದ್ರಿತ ಕಲಿಕೆಗೆ ಉತ್ತಮ ಮಾದರಿಯಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ನವೀನ ಹಾಗೂ ವೈಜ್ಞಾನಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಆಶಯವನ್ನು ಶಾಲಾ ಆಡಳಿತ ಮಂಡಳಿ ವ್ಯಕ್ತಪಡಿಸಿದೆ. ಈ ಈ ಕಾರ್ಯಕ್ರಮದಲ್ಲಿ ಡ್ಯಾಪ್ಫೊಡಿಲ್ಸ್ ಸಂಸ್ಥೆಯ ಅಧ್ಯಕ್ಷರಾದ ಲಕ್ಷ್ಮಿ ನಾರಾಯಣ ರೆಡ್ಡಿ, ಶಾಲೆಯ ಮುಖ್ಯೋಪಾಧ್ಯಾಯರು , ಶಿಕ್ಷಕರು , ಉಪನ್ಯಾಸಕರು, ವಿದ್ಯಾರ್ಥಿಗಳು , ಹಾಗೂ ಪಾಲಕರು ಉಪಸ್ಥಿತರಿದ್ದರು ಈ ವಿಜ್ಞಾನ ಪ್ರದರ್ಶನವು ಫೆಬ್ರುವರಿ 01 2026 ಮಧ್ಯಾಹ್ನ 3 ಗಂಟೆವರೆಗೆ ನಡೆಯುತ್ತದೆ ಎಂದು ಸಂಸ್ಥೆ ಅಧ್ಯಕ್ಷರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.